♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

ASK ಮೈಸೂರು

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 06 | ಸಂಚಿಕೆ Issue 309 | ಶನಿವಾರ Saturday | 30-03-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಇದು ಮಂಡ್ಯ ಜಿಲ್ಲೆಯ ಸ್ವಾಭಿಮಾನದ ಚುನಾವಣೆ: ಸಿಆರ್‌ಎಸ್

■ ಕಾಯಕಯೋಗಿ ಸುದ್ದಿ

ಮಂಡ್ಯ : ರಾಷ್ಟ್ರಕವಿ ಕುವೆಂಪು ಅವರ ತತ್ವ-ಸಿದ್ಧಾಂತಗಳನ್ನು ಪಾಲಿಸುತ್ತಿರುವ ಜಿಲ್ಲೆಯ ಜನತೆ ಬಹಳ ಪ್ರಬುದ್ಧರು. ಜಿಲ್ಲೆಯ ಸ್ವಾಭಿಮಾನವನ್ನು ಬೇರೆಯವರಿಗೆ ಎಂದೂ ಮಾರಿಕೊಂಡಿಲ್ಲ. ಈ ಚುನಾವಣೆ ಜಿಲ್ಲೆಯ ಸ್ವಾಭಿಮಾನದ ಸಂಕೇತವಾಗಿದ್ದು, ಹೊರ ಜಿಲ್ಲೆಯವರನ್ನು ಗೆಲ್ಲಿಸದಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಆತ್ಮವಿಶ್ವಾಸ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಏ.1ರಂದು ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರು ನಾಮಪತ್ರ ಸಲ್ಲಿಸಲಿದ್ದು, ಬೆಳಿಗ್ಗೆ 9 ಗಂಟೆಗೆ ನಗರದ ಶ್ರೀ ಕಾಳಿಕಾಂಬ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ಅಲ್ಲಿಂದ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿಗೆ ತೆರಳಿ ಉಮೇದುವಾರಿಕೆ ಸಲ್ಲಿಸಲಿದ್ದಾರೆ. ಅಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಸುರ್ಜಿತ್ ಸಿಂಗ್ ಸುರ್ಜೇವಾಲ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಆಗಮಿಸಲಿದ್ದು, ಮಂಡ್ಯ ಲೋಕಸಭೆಯ 8 ಕ್ಷೇತ್ರಗಳಿಂದ ಸುಮಾರು ಒಂದು ಲಕ್ಷ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಅಂದು ಯಾವುದೇ ಬಹಿರಂಗ ಸಭೆ ನಡೆಸುವುದಿಲ್ಲ. ತೆರೆದ ವಾಹನದ ಮೂಲಕವೇ ಸುರ್ಜೇವಾಲ ಹಾಗೂ ಡಿ.ಕೆ. ಶಿವಕುಮಾರ್ ಅವರು ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಮಂಡ್ಯ ಜಿಲ್ಲೆಯ ಜನತೆ ಭಾಗವಹಿಸುವಂತೆ ಕೋರಿದರು.



ಕುಮಾರಸ್ವಾಮಿ ಅವರ ಬಳಿಯೇ ಸತ್ಯ ಇದೆ ಅಂದುಕೊಂಡಿದ್ದಾರೆ. ನಮ್ಮ ಬಳಿಯೂ ಸತ್ಯ-ಧರ್ಮ ಇದೆ. ಕುಮಾರಸ್ವಾಮಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಿದರು.

ಕುಮಾರಸ್ವಾಮಿ ಅವರ ಬಳಿಯೇ ಸತ್ಯ ಇದೆ ಅಂದುಕೊಂಡಿದ್ದಾರೆ. ನಮ್ಮ ಬಳಿಯೂ ಸತ್ಯ-ಧರ್ಮ ಇದೆ. ಕುಮಾರಸ್ವಾಮಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಿದರು.

ಕುಮಾರಸ್ವಾಮಿ ಅವರು ಬಿಜೆಪಿ ಧರ್ಮ ಇರಬೇಕು ಎಂದು ವ್ಯಂಗ್ಯವಾಡಿದರು.

ಕುಮಾರಸ್ವಾಮಿ ಅವರಿಗಿಂತಲೂ ಹೆಚ್ಚು ಭಾವನೆ ನಮಗಿದೆ. ಇದು ನಮ್ಮ ಜನ್ಮಭೂಮಿ. ರಾಜಕೀಯ ಮಾಡುತ್ತಿದ್ದೇವೆ. ಇಲ್ಲೇ ನಮ್ಮ ಮಣ್ಣು ಆಗೋದು. ಅದಕ್ಕೆ ನಮಗೆ ಕುಮಾರಸ್ವಾಮಿಗಿಂತಲೂ ಹೆಚ್ಚು ಭಾವನಾತ್ಮಕತೆ ಈ ಜಿಲ್ಲೆಯೊಂದಿಗೆ ಇದೆ ಎಂದು ಹೇಳಿದರು.

ನಿಮ್ಮನ್ನು ತುಳಿದcertain ಅವರಿಗೆ ಏನು ಸಿಗುತ್ತೆ?: ನಮ್ಮನ್ನು ತಳಿದು ಅವರಿಗೆ ಸಿಗುವುದಾರೂ ಏನು? ಈ ಜಿಲ್ಲೆಯ ಜನರಲ್ಲಿ ಕಣ್ಣೀರು ಹಾಕಿಸಿದರೆ ಏನು ಸಿಗುತ್ತದೆ ಎಂದು ಪ್ರಶ್ನಿಸಿದ ಅವರು, 2018ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 84 ಸ್ಥಾನ ಗೆದ್ದಿದ್ದಾಗ ಅವರನ್ನು ಮುಖ್ಯಮಂತ್ರಿ ಮಾಡಲು ಸಿದ್ದರಾಮಯ್ಯ ಅವರು ವಿರೋಧ ಮಾಡಿರಲಿಲ್ಲ. ಯಾವುದಾದರೂ ವೇದಿಕೆಯಲ್ಲಿ ಇವರು ನಮಗೂ ಕಾಂಗ್ರೆಸ್ ವ್ಯತ್ಯಾಸ ಇದೆ. ಆದರೆ, ನಾವು ಪ್ರಧಾನಿ ಹಾಗೂ ಮುಖ್ಯಮಂತ್ರಿಯಾಗಿದ್ದು ಕಾಂಗ್ರೆಸ್ ಸಹಕಾರದಿಂದ ಎಂದು ಹೇಳಿದ್ದಾರಾ. ಕುಟುಂಬದ ಬಗ್ಗೆ ಮಾತ್ರ ಚಿಂತಿಸಿವ ಅವರಿಗೆ ಜಿಲ್ಲೆಯ ಅಭಿವೃದ್ಧಿ ಬೇಡ ಎಂದು ಟೀಕಿಸಿದರು.

ಜಿಲ್ಲೆಯಲ್ಲಿ ಎಂದಾದರೂ ಧರ್ಮ ಮತ್ತು ಜಾತಿಗಳ ಮಧ್ಯೆ ಜಗಳ ಆಗಿದೆಯೇ? ಯಾವುದೇ ಬೇಧ-ಭಾವವಿಲ್ಲದೇ ಬದುಕು ನಡೆಸುತ್ತಿದ್ದೇವೆ. ಜಿಲ್ಲೆಯ ಎಲ್ಲ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಒಗ್ಗಟ್ಟಿನಿಂದ ಕೆಲಸ ಮಾಡುತ್ತಿದ್ದೇವೆ. ಜಾ.ದಳದಲ್ಲಿ ಮೂರು ಬಣಗಳಿವೆ. ನಮ್ಮ ಒಗ್ಗಟ್ಟನ್ನು ಸಹಿಸದ ಇವರು ಜಾತಿ-ಜಾತಿಗಳ ನಡುವೆ ಸಂಘರ್ಷ ತರಲು ಹೊರಟಿದ್ದಾರೆ ಅವರ ನಾಟಕ ಜಿಲ್ಲೆಯಲ್ಲಿ ನಡೆಯುವುದಿಲ್ಲ ಜಿಲ್ಲೆಗೆ ಹೊಸ ಕಾರ್ಖಾನೆ, ಕೃಷಿ ವಿಶ್ವವಿದ್ಯಾಲಯ ಸೇರಿದಂತೆ ಇಲ್ಲೇ ಹುಟ್ಟಿ ಬೆಳೆದು, ವ್ಯಾಪಾರ-ವಹಿವಾಟು ನಡೆಸಿ, ಇದೇ ನೆಲದಲ್ಲಿ

ರಾಜಕೀಯ ಮಾಡುತ್ತಿದ್ದೇವೆ. ಇಲ್ಲೇ ನಮ್ಮ ಮಣ್ಣು ಆಗೋದು. ಅದಕ್ಕೆ ನಮಗೆ ಕುಮಾರಸ್ವಾಮಿಗಿಂತಲೂ ಹೆಚ್ಚು ಭಾವನಾತ್ಮಕತೆ ಈ ಜಿಲ್ಲೆಯೊಂದಿಗೆ ಇದೆ ಎಂದು ಹೇಳಿದರು.

ನಂಜನಗೂಡು ಉಪಚುನಾವಣೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರ ಸಭೆಯಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಅವರ ಪರ ಸಚಿವ ಎನ್.ಚಲುವರಾಯಸ್ವಾಮಿ ಭರ್ಜರಿ ಬ್ಯಾಟಿಂಗ್ ಮಾಡಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ನಾನು ಮತ್ತು ನನ್ನ ಸ್ನೇಹಿತರು ಬಹಳ ಕಷ್ಟಪಟ್ಟವರು. ಅದು ನಾವು ಮಾಡಿದ ಅಪರಾಧವಾ ಎಂದು ಪ್ರಶ್ನಿಸಿದರು.

ಕಷ್ಟಪಟ್ಟಿದ್ದೇವೆ ಎಂದು ನಮಗೆ ಮಾತ್ರ ಗೊತ್ತು. ಇಂದು ಅವರು ಅದೆಲ್ಲವನ್ನೂ ಮರೆತು ನಮ್ಮನ್ನು ಶತ್ರುಗಳ ರೀತಿ ಕಾಣುತ್ತಿದ್ದಾರೆ ಎಂದರು.

ಇಂದು ಒಂದು ಗ್ರಾಮ ಪಂಚಾಯಿತಿ ಸದಸ್ಯನಾಗಲು ಎಷ್ಟು ಖರ್ಚು ಮಾಡುತ್ತೀರಾ ಎನ್ನುವುದು ಗೊತ್ತಿದೆ. ಆದರೆ, ಅವತ್ತು ಒಂದು ರೂಪಾಯಿಯನ್ನೂ ಅವರಿಂದ ಖರ್ಚು ಮಾಡಿಸಿರಲಿಲ್ಲ. ನಾನು ಮತ್ತು ನಮ್ಮ 39 ಸ್ನೇಹಿತರು ಬಹಳ ಕಷ್ಟಪಟ್ಟವರು. ಅದು ನಾವು ಮಾಡಿದ ಅಪರಾಧವಾ ಎಂದು ಪ್ರಶ್ನಿಸಿದರು.

ಮಳವಳ್ಳಿಯಲ್ಲಿ ಸ್ಟಾರ್ ಚಂದ್ರು ಪರ ಸಿಆರ್‌ಎಸ್ ಬ್ಯಾಟಿಂಗ್

■ ಕಾಯಕಯೋಗಿ ಸುದ್ದಿ

ಮಳವಳ್ಳಿ: ಮಳವಳ್ಳಿ ಪಟ್ಟಣದಲ್ಲಿಂದು ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರ ಸಭೆಯಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಅವರ ಪರ ಸಚಿವ ಎನ್.ಚಲುವರಾಯಸ್ವಾಮಿ ಭರ್ಜರಿ ಬ್ಯಾಟಿಂಗ್ ಮಾಡಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ನಾನು ಮತ್ತು ನನ್ನ ಸ್ನೇಹಿತರು ಬಹಳ ಕಷ್ಟಪಟ್ಟವರು. ಅದು ನಾವು ಮಾಡಿದ ಅಪರಾಧವಾ ಎಂದು ಪ್ರಶ್ನಿಸಿದರು.

ಇಂದು ಒಂದು ಗ್ರಾಮ ಪಂಚಾಯಿತಿ ಸದಸ್ಯನಾಗಲು ಎಷ್ಟು ಖರ್ಚು ಮಾಡುತ್ತೀರಾ ಎನ್ನುವುದು ಗೊತ್ತಿದೆ. ಆದರೆ, ಅವತ್ತು ಒಂದು ರೂಪಾಯಿಯನ್ನೂ ಅವರಿಂದ ಖರ್ಚು ಮಾಡಿಸಿರಲಿಲ್ಲ. ನಾನು ಮತ್ತು ನಮ್ಮ 39 ಸ್ನೇಹಿತರು ಬಹಳ ಕಷ್ಟಪಟ್ಟವರು. ಅದು ನಾವು ಮಾಡಿದ ಅಪರಾಧವಾ ಎಂದು ಪ್ರಶ್ನಿಸಿದರು.

ಸಹಕಾರದಿಂದ ಎಂದು ಹೇಳಿದ್ದಾರಾ. ಕುಟುಂಬದ ಬಗ್ಗೆ ಮಾತ್ರ ಚಿಂತಿಸಿವ ಅವರಿಗೆ ಜಿಲ್ಲೆಯ ಅಭಿವೃದ್ಧಿ ಬೇಡ ಎಂದು ಟೀಕಿಸಿದರು.

ಜಿಲ್ಲೆಯಲ್ಲಿ ಎಂದಾದರೂ ಧರ್ಮ ಮತ್ತು ಜಾತಿಗಳ ಮಧ್ಯೆ ಜಗಳ ಆಗಿದೆಯೇ? ಯಾವುದೇ ಬೇಧ-ಭಾವವಿಲ್ಲದೇ ಬದುಕು ನಡೆಸುತ್ತಿದ್ದೇವೆ. ಜಿಲ್ಲೆಯ ಎಲ್ಲ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಒಗ್ಗಟ್ಟಿನಿಂದ ಕೆಲಸ ಮಾಡುತ್ತಿದ್ದೇವೆ. ಜಾ.ದಳದಲ್ಲಿ ಮೂರು ಬಣಗಳಿವೆ. ನಮ್ಮ ಒಗ್ಗಟ್ಟನ್ನು ಸಹಿಸದ ಇವರು ಜಾತಿ-ಜಾತಿಗಳ ನಡುವೆ ಸಂಘರ್ಷ ತರಲು ಹೊರಟಿದ್ದಾರೆ ಅವರ ನಾಟಕ ಜಿಲ್ಲೆಯಲ್ಲಿ ನಡೆಯುವುದಿಲ್ಲ ಜಿಲ್ಲೆಗೆ ಹೊಸ ಕಾರ್ಖಾನೆ, ಕೃಷಿ ವಿಶ್ವವಿದ್ಯಾಲಯ ಸೇರಿದಂತೆ

ಸಾವಿರಾರು ಕೋಟಿ ಅನುದಾನ ನೀಡಿರುವ ಸಿದ್ದರಾಮಯ್ಯ ಅವರು ಒಕ್ಕಲಿಗರ ವಿರೋಧಿನಾ ಎನ್ನುವುದನ್ನು ಜನರು ಅರ್ಥ ಮಾಡಿಕೊಳ್ಳಬೇಕಿದೆ ಎಂದು ಹೇಳಿದರು.

ನಮ್ಮ ಅಭ್ಯರ್ಥಿ ಉದ್ಯಮಿಯಾಗಿ ಸಾವಿರಾರು ಮಂದಿಗೆ ಉದ್ಯೋಗ ನೀಡಿದ್ದಾರೆ. ನೀವು ಕರೆದಾಗ ನಿಮ್ಮ ಮುಂದೆ ಬರುತ್ತಾರೆ. ಆದರೆ, ಕುಮಾರಸ್ವಾಮಿ ಅವರು ಬರುತ್ತಾರಾ? ಮಳವಳ್ಳಿಯವರು ಒಮ್ಮೆ ಎಂಪಿಯಾಗಿ ಗೆಲ್ಲಿಸಿದ್ದೀರಿ, ನಾವು ನೀವು ಭಾವನಾತ್ಮಕವಾಗಿ ಅವರಿಗೆ ಬಲಿ ಆಗಿದ್ದೀವಿ. ಪಕ್ಷ ಕಟ್ಟಲು ಬರುವುದಾದರೆ ಅವರು ಬರುವುದು ಬೇಡ, ನಮ್ಮದೇ ಸರ್ಕಾರ ಇದೆ, ನಾವೆಲ್ಲರೂ ಒಟ್ಟಾಗಿ ನಾಲ್ಕು ವರ್ಷ ಕೆಲಸ ಮಾಡುತ್ತೇವೆ, ನಮ್ಮಿಂದ ಏನಾದರೂ

ತಪ್ಪಾದರೆ ಆಷ್ಟೂ ಜನ ಮನೆಗೆ ಹೋಗುತ್ತೇವೆ. ಆಗ ಹೊಸದಾಗಿ ಅವರನ್ನು ಆಯ್ಕೆ ಮಾಡಿಕೊಳ್ಳಲಿ, ನಾವು ಸೇವೆ ಮಾಡುತ್ತೇವೆ ಎಂದು ಹೇಳಿದರು.

ನಮ್ಮ ಸರ್ಕಾರದ ಕಾರ್ಯಕ್ರಮಗಳನ್ನು ಕಾರ್ಯಕರ್ತರು ಮನೆ ಮನೆಗೆ ಹೋಗಿ ತಿಳಿಸಿ ಅಭ್ಯರ್ಥಿ ವೆಂಕಟರಮಣೇಗೌಡ ಅವರನ್ನು ಗೆಲ್ಲಿಸುವ ಮೂಲಕ ಜಿಲ್ಲೆಯ ಸ್ವಾಭಿಮಾನವನ್ನು ಮತ್ತೊಮ್ಮೆ ಎತ್ತಿ ಹಿಡಿಯೋಣ ಎಂದು ಕರೆ ನೀಡಿದರು.

ಶಾಸಕ ಪಿ.ಎಂ.ನರೇಂದ್ರಸ್ವಾಮಿ ಅವರು ಮಂತ್ರಿಯಾಗುವುದು ಖಚಿತ. ಯಾವುದೇ ಕಾರಣಕ್ಕೂ ಪ್ರಚೋದನೆ, ಭಾವನಾತ್ಮಕತೆ ಒಳಗಾಗದೇ ಜನರು ಅಭಿವೃದ್ಧಿಗೆ ಮತ ನೀಡಬೇಕೆಂದು ಮನವಿ ಮಾಡಿದರು.

ಎಸ್.ಎಂ.ಕೃಷ್ಣ ಭೇಟಿಯಾದ ಡಿಕೆ ಸುರೇಶ್

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಎಸ್ ಎಂ ಕೃಷ್ಣ ಅವರನ್ನು ಹಾಲಿ ಸಂಸದ ಡಿಕೆ ಸುರೇಶ್ ಭೇಟಿಯಾಗಿ ಆಶೀರ್ವಾದ ಪಡೆದಿದ್ದಾರೆ.

ಲೋಕಸಭೆ ಚುನಾವಣೆ ಹಿನ್ನೆಲೆ ಬೆಂಗಳೂರಿನ ಸದಾಶಿವನಗರದ ನಿವಾಸದಲ್ಲಿರುವ ನಿವಾಸಕ್ಕೆ ಭೇಟಿ ನೀಡಿ ಕೃಷ್ಣ ಅವರೊಂದಿಗೆ ಮಾತುಕತೆ ನಡೆಸಿರುವುದು ತೀವ್ರ ಕುತೂಹಲ ಮೂಡಿಸಿದೆ. ಭೇಟಿ ಬಗ್ಗೆ ಎಕ್ಸ್ ಪೋಸ್ಟ್ ಮಾಡಿದ ಡಿಕೆ ಸುರೇಶ್, ಇಂದು ಕರ್ನಾಟಕದ ಹಿರಿಯ ರಾಜಕಾರಣಿ, ಮಾಜಿ ಮುಖ್ಯಮಂತ್ರಿಗಳಾದ ಎಸ್.ಎಂ.ಕೃಷ್ಣ ದಂಪತಿಗಳ ಆಶೀರ್ವಾದ ಪಡೆದೆ. ಈ ವೇಳೆ ಅವರ ಸುದೀರ್ಘವಾದ ರಾಜಕೀಯ ಅನುಭವ ಮತ್ತು ಹಂಚಿಕೊಂಡ ಸಲಹೆಗಳು ಮತ್ತಷ್ಟು ನನಗೆ ಸ್ಫೂರ್ತಿಯನ್ನು ನೀಡಿವೆ ಎಂದಿದ್ದಾರೆ.

ಏ.1ರಂದು ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ನಾಮಪತ್ರ ಸಲ್ಲಿಕೆ

■ ಕಾಯಕಯೋಗಿ ಸುದ್ದಿ

ಮಂಡ್ಯ: ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರು ಏ. 1ರಂದು ನಾಮಪತ್ರ ಸಲ್ಲಿಸಲಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಮಂಡ್ಯ ನಗರದ ಶಕ್ತಿ ದೇವತೆ ಶ್ರೀ ಕಾಳಿಕಾಂಬ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ಅಲ್ಲಿಂದ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿಗೆ ತೆರಳಿ ಉಮೇದುವಾರಿಕೆ ಸಲ್ಲಿಸಲಾಗುವುದು ಎಂದು ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಅಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಸುರ್ಜಿತ್ ಸಿಂಗ್ ಸುರ್ಜೇವಾಲ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಆಗಮಿಸಲಿದ್ದು, ಮಂಡ್ಯ ಲೋಕಸಭೆಯ 8 ಕ್ಷೇತ್ರಗಳಿಂದ ಸುಮಾರು ಒಂದು ಲಕ್ಷ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದರು.

ಅಂದು ಯಾವುದೇ ಬಹಿರಂಗ ಸಭೆ ನಡೆಸುವುದಿಲ್ಲ. ತೆರೆದ ವಾಹನದ ಮೂಲಕವೇ ಸುರ್ಜೇವಾಲ ಹಾಗೂ ಡಿ.ಕೆ. ಶಿವಕುಮಾರ್ ಅವರು ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಮಂಡ್ಯ ಜಿಲ್ಲೆಯ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಿದರು.

ಮಂಡ್ಯ ಸ್ವಾಭಿಮಾನ ಕಾಪಾಡಬೇಕು: ಮಂಡ್ಯ ಜಿಲ್ಲೆಯ ಜನ ಬಹಳ ಪ್ರಬುದ್ಧರು, ರಾಷ್ಟ್ರಕವಿ ಕುವೆಂಪು ಅವರ ತತ್ವ-ಸಿದ್ಧಾಂತಗಳನ್ನು ಪಾಲಿಸುತ್ತಿರುವವರು. ಜಿಲ್ಲೆಯ ಸ್ವಾಭಿಮಾನವನ್ನು ಬೇರೆಯವರಿಗೆ ಎಂದೂ ಮಾರಿಕೊಂಡಿಲ್ಲ. ಆದ್ದರಿಂದ ಈ ಚುನಾವಣೆ ಜಿಲ್ಲೆಯ ಸ್ವಾಭಿಮಾನದ ಸಂಕೇತವಾಗಿದ್ದು, ಹೊರ ಜಿಲ್ಲೆಯವರನ್ನು ಗೆಲ್ಲಿಸದೆ, ಮಂಡ್ಯದವರನ್ನೇ ಗೆಲ್ಲಿಸಲಿದ್ದಾರೆ ಎಂಬ ನಂಬಿಕೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಒಂದು ತಿಂಗಳ ಹಿಂದೆಯೇ ಸ್ಟಾರ್ ಚಂದ್ರು ಅವರನ್ನು ಅಭ್ಯರ್ಥಿ ಎಂದು ಘೋಷಣೆ ಮಾಡಲಾಗಿತ್ತು. ಈಗಾಗಲೇ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಂದು ಸುತ್ತಿನ ಪ್ರಚಾರ ಸಭೆ ಮುಗಿದಿದೆ. ಗ್ರಾಪಂ ವ್ಯಾಪ್ತಿಯಲ್ಲಿ ಪ್ರಚಾರ ನಡೆಸಿದ್ದೇವೆ. ಮಂಡ್ಯ ಜಿಲ್ಲೆಯ ಜನರು ಕಾಂಗ್ರೆಸ್ಸನ್ನು ಏಕೆ ಬೆಂಬಲಿಸಬೇಕು ಎಂಬುದನ್ನು ನಾಮಪತ್ರ ಸಲ್ಲಿಸಿದ ನಂತರ ತಿಳಿಸುವುದಾಗಿ ಹೇಳಿದರು.

ಸತ್ಯ-ಧರ್ಮಕ್ಕೆ ಗೆಲುವು: ಚುನಾವಣೆಯಲ್ಲಿ ಸತ್ಯ ಹಾಗೂ ಧರ್ಮಕ್ಕೆ ಗೆಲುವು. ಕುಮಾರಸ್ವಾಮಿ ಅವರ ಬಳಿಯೇ ಸತ್ಯ ಇದೆ ಅಂದುಕೊಂಡಿದ್ದಾರೆ. ನಮ್ಮ ಬಳಿಯೂ ಸತ್ಯ-ಧರ್ಮ ಇದೆ. ಕುಮಾರಸ್ವಾಮಿ ಧರ್ಮಯುದ್ಧ ಎಂದಿದ್ದಾರೆ. ಬಹುಶಃ ಅವರದ್ದು ಬಿಜೆಪಿ ಧರ್ಮ ಇರಬೇಕು ಎಂದು ವ್ಯಂಗ್ಯವಾಡಿದರು.

ಕುಮಾರಸ್ವಾಮಿ ಅವರಿಗಿಂತಲೂ ಹೆಚ್ಚು ಭಾವನೆ ನಮಗಿದೆ. ಇದು ನಮ್ಮ ಜನ್ಮಭೂಮಿ. ಇಲ್ಲೇ ಹುಟ್ಟಿ, ಬೆಳೆದು, ವ್ಯಾಪಾರ-ವಹಿವಾಟು ನಡೆಸಿ, ಇದೇ ನೆಲದಲ್ಲಿ

ರಾಜಕೀಯ ಮಾಡುತ್ತಿದ್ದೇವೆ. ಇಲ್ಲೇ ನಮ್ಮ ಮಣ್ಣು ಆಗೋದು. ಅದಕ್ಕೆ ನಮಗೆ ಕುಮಾರಸ್ವಾಮಿಗಿಂತಲೂ ಹೆಚ್ಚು ಭಾವನಾತ್ಮಕತೆ ಈ ಜಿಲ್ಲೆಯೊಂದಿಗೆ ಇದೆ ಎಂದು ಹೇಳಿದರು.

ಸುಮಲತಾ ನಿರ್ಧಾರ ಪ್ರಕಟಿಸಲಿ: ಸಂಸದೆ ಸುಮಲತಾ ಅವರಿಗೆ ನಾನು ಏನೂ ಹೇಳೋಲ್ಲ. ಅವರು ಏನು ಬೇಕಾದರೂ ತೀರ್ಮಾನ ಮಾಡಲಿ. ಅದಕ್ಕೆ ನನ್ನ ಆಕ್ಷೇಪ ಇಲ್ಲ. ಅವರ ಬೆಂಬಲಿಗರು ಜಾ.ದಳಕ್ಕೆ ಹೇಗೆ ಕೆಲಸ ಮಾಡೋದು ಎಂದು ಹೇಳುತ್ತಿದ್ದಾರೆ. ಸುಮಲತಾ ಅವರು ಶನಿವಾರ ಬೆಂಗಳೂರಿನ ನಿವಾಸದಲ್ಲಿ ಬೆಂಬಲಿಗರ ಸಭೆ ಕರೆದಿದ್ದಾರೆ. ಸಭೆಯ ಬಳಿಕ ಏನು ನಿರ್ಧಾರ ತೆಗೆದುಕೊಳ್ಳುತ್ತಾರೆ ನೋಡೋಣ ಎಂದಷ್ಟೇ ಹೇಳಿದರು.

ಕುಮಾರಸ್ವಾಮಿ ಅವರು ಸುಮಲತಾ ಅವರನ್ನು ಅಕ್ಕ ಅಂದಿದ್ದಾರೆ. ಇದೊಂದು ವಿಪರ್ಯಾಸ ಎಂದ ಚಲುವರಾಯಸ್ವಾಮಿ, ನಾನು ಕುಮಾರಸ್ವಾಮಿ ಅವರನ್ನು ಯಾವಾಗಲೂ ಸ್ನೇಹಿತರು ಎಂದೇ ಕರೆದಿದ್ದೇನೆ. ಅವರು ಮಾತ್ರ ನನ್ನನ್ನು ಅಜಾತ ಶತ್ರು ಎಂದಿದ್ದಾರೆ. ಇನ್ನೂ ಏನು ಮಾತಾಡುತ್ತಾರೆ ಅಂತ ಮುಂದೆ ನೋಡೋಣ ಎಂದು ಹೇಳಿದರು.

ಸ್ಟಾರ್ ಚಂದ್ರು ಅಭ್ಯರ್ಥಿ: ವೆಂಕಟರಮಣೇಗೌಡ (ಸ್ಟಾರ್ ಚಂದ್ರು), ಶಾಸಕ ಪಿ.ರವಿಕುಮಾರ್, ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಕಾರ್ಯಾಧ್ಯಕ್ಷ ಎಂ.ಎಸ್.ಚಿದಂಬರ್, ವಿಜಯಲಕ್ಷ್ಮೀ ರಘುನಂದನ್, ಕುರುಬರ ಸಂಘದ ಅಧ್ಯಕ್ಷ ಸುರೇಶ್ ಹಾಜರಿದ್ದರು.

ಕಬ್ಬಿನ ಜೊಲ್ಲೆ ಹಿಡಿದು ರೈತರಿಂದ ಪ್ರತಿಭಟನೆ



ಶ್ರೀರಂಗಪಟ್ಟಣ: ನಾಲೆಗಳಿಗೆ ನೀರು ಹರಿಸಿ ಕೊಳವೆ ಬಾವಿಗಳ ಅಂತರ್ ಜಲ ರಕ್ಷಿಸಿ ಬೆಳೆಗಳ ಉಳಿಸಬೇಕು ಎಂದು ಒತ್ತಾಯಿಸಿ ಭೂಮಿತಾಯಿ ಹೋರಾಟ ಸಮಿತಿ ಕಾರ್ಯಕರ್ತರು ಜಾನುವಾರುಗಳೊಂದಿಗೆ ಒಣ ಕಬ್ಬಿನ ಜೊಲ್ಲೆಗಳ ಹಿಡಿದು ಮೆರವಣಿಗೆ ನಡೆಸಿ ಪ್ರತಿಭಟಿಸಿದರು.

ಭೂಮಿತಾಯಿ ಹೋರಾಟ ಸಮಿತಿ ಅಧ್ಯಕ್ಷ ಬಲ್ಲೇನಹಳ್ಳಿ ಕೃಷ್ಣೇಗೌಡ ಹಾಗೂ ರೈತ ಮುಖ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–2 | 30–03–2024

ಮಂಡ್ಯ

ಶ್ರೀ ಕಾಳೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ

■ ಕಾಯಕಯೋಗಿ ಸುದ್ದಿ

ಮಳವಳ್ಳಿ: ತಾಲ್ಲೂಕಿನ ಹಲಗೂರು ಸಮೀಪವಿರುವ ಯತ್ತಂಬಾಡಿ ಗ್ರಾಮದ ಕಾಳೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವ ಅದ್ಧೂರಿಯಾಗಿ ನಡೆಸಲಾಯಿತು.

ಸಾವಿರಾರು ಭಕ್ತರ ಸಮ್ಮುಖದಲ್ಲಿ ಮೂರು ದೇವತೆಗಳ ಕರಗ ಉತ್ಸವ ಮೂರ್ತಿ ಯನ್ನು ಪೂಜಾಕುಣಿತ ,ನಗಾರಿ ತಮಟೆಯೊಂದಿಗೆ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು.

ಈ ಬೀದಿಗಳಲ್ಲಿ ಪಾನಕ ವಿತರಣೆ ಮಾಡಲಾಯಿತು.

ಈ ವೇಳೆ ಯತ್ತಂಬಾಡಿ ಗ್ರಾಮದ ಮುಖಂಡ ಕೃಷ್ಣಪ್ಪ ಮಾತನಾಡಿ ಮೂರು ದಿನಗಳ ಕಾಲ ನಡೆಯುವ ಜಾತ್ರೆಗೆ ಯತ್ತಂಬಾಡಿ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ಸಾವಿರಾರು ಭಕ್ತರು ಆಗಮಿಸಿ ದೇವರ ದರ್ಶನ ಪಡೆದುಕೊಂಡುಪೂಜೆ ಸಲ್ಲಿಸಿದರು.

ಜಾತ್ರೆಗೆ ಬಂದಿದ್ದ ಭಕ್ತಾದಿಗಳಿಗೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆ ಸೂಕ್ತ ಬಂದೋ ಬಸ್ತ್ ಏರ್ಪಡಿಸಲಾಗಿತ್ತು.



ಬೆಂಬಲಿಗರು –ಹಿತೈಷಿಗಳ ನಿರ್ಧಾರವೇ ಅಂತಿಮ: ಮಹಾಲಿಂಗೇಗೌಡ

■ ಕಾಯಕಯೋಗಿ ಸುದ್ದಿ

ಮಂಡ್ಯ : ಜಿಲ್ಲೆಯಲ್ಲಿ ಮಾಜಿ ಪ್ರಧಾನಮಂತ್ರಿ ಎಚ್.ಡಿ.ದೇವೇಗೌಡ ಮತ್ತು ಎಚ್.ಡಿ.ಕುಮಾರಸ್ವಾಮಿ ಅವರ ಅಭಿಮಾನಿಯಾಗಿ ಸೇವೆ ಸಲ್ಲಿಸುತ್ತಿದ್ದೆ ಎಂದು ಮಂಡ್ಯ ವಿಧಾನಸಭಾ ಕ್ಷೇತ್ರದ ಸಮಾಜಸೇವಕ, ಉದ್ಯಮಿ ಮತ್ತು ಬಸರಾಳು ಗ್ರಾಪಂ.ಮಾಜಿ ಅಧ್ಯಕ್ಷ ಮಹಾಲಿಂಗೇಗೌಡ ಮುದ್ದನಘಟ್ಟ ಹೇಳಿದರು.

ತಾಲೂಕಿನ ಬಸರಾಳು ಗ್ರಾಮದಲ್ಲಿರುವ ತಾರಾ ಫಾರ್ಮ್ ಹೌಸ್ ಆವರಣದಲ್ಲಿ ಮಹಾಲಿಂಗೇಗೌಡ ಮುದ್ದನಘಟ್ಟ ಫೌಂಡೇಶನ್ ಮತ್ತು ಕ್ಷೇತ್ರದ ಸಮಾಜಸೇವಕ ಮುದನಘಟ್ಟ ಮಹಾಲಿಂಗೇಗೌಡ ಅವರ ಹಿತೈಷಿಗಳು, ಬೆಂಬಲಿಗರು, ಅಭಿಮಾನಿಗಳು ಆಯೋಜಿಸಿದ್ದ ರಾಜಕೀಯ ಕ್ಷೇತ್ರದ ಮುಂದಿನ ನಡೆ ಬಗ್ಗೆ ಹಿತೈಷಿಗಳು, ಬೆಂಬಲಿಗರು, ಅಭಿಮಾನಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ನಮ್ಮ ತಂದೆ ಅವರು ಕಳೆದ 30–40ವರ್ಷಗಳ ಹಿಂದಯೇ ಎಚ್.ಡಿ.ದೇವೇಗೌಡ ಅವರ ಅಭಿಮಾನಿಯಾಗಿದ್ದರು, ನಾವು ಇನ್ನೂ ಕಾಲೇಜು ಓದುವ ಹಂತದಲ್ಲಿದ್ದೇವು, ಮಾಜಿ ಶಾಸಕರಾದ ಜಿ.ಜಿ.ಶಿವಕುಮಾರ್ ಅವರ ಒಡನಾಡಿಯಾಗಿ ನಮ್ಮ ತಂದೆ ಗುರುತಿಸಿಕೊಂಡು ಜನತಾದಳದಲ್ಲಿ ಸೇವೆ ಸಲ್ಲಿಸುತ್ತಿದ್ದರು ಗ್ರಾಪಂ.ಚುನಾವಣೆಯಲ್ಲಿ ಸ್ಪರ್ಧೆ ಮಾಡುತ್ತಿದ್ದರು ಎಂದು ಸ್ಮರಿಸಿಕೊಂಡರು.

ನಂತರದ ದಿನಗಳಲ್ಲಿ ನಾವು ಬೆಂಗಳೂರಿನಲ್ಲಿ ಶ್ರೀನಗರ ಯುವ ಘಟಕದ ಅಧ್ಯಕ್ಷನಾಗಿ, ಉದ್ಯೋಗ–ಉದ್ಯಮ ಸ್ಥಾಪಿಸಿ, ಎಚ್.ಡಿ.ಕುಮಾರಸ್ವಾಮಿ ಅವರ ಅಭಿಮಾನಿಯಾಗಿ ಗುರುತಿಸಿಕೊಂಡು, ಹುಟ್ಟಿರಿಗೆ ಏನಾದರೂ ಸೇವೆ ಸಲ್ಲಿಸಬೇಕು ಎಂಬ ಹಂಬಲದಿಂದ ಸಮಾಜಸೇವಕನಾಗಿ ದುಡಿಯುತ್ತಿದ್ದೇ ಎಂದು ನುಡಿದರು.

ಮೊದಲು ನನಗೆ ರಾಜಕೀಯ ಜೀವನವನ್ನು ಕೊಟ್ಟಿರುವ ಗ್ರಾಮಗಾಳದ ಕೋಡಿಕೊಪ್ಪಲು, ವಡ್ಡರಹಳ್ಳಿ, ಮೋಳೆಕೊಪ್ಪಲು, ಗುಂಡಾಪುರ, ಹೆಮ್ಮಾವಿ ಬಡಾವಣೆ, ಹೆಗ್ಗಡತಹಳ್ಳಿ ಗ್ರಾಮದ ಜನತೆಯ ಋಣವನ್ನು ತೀರಿಸಲಾಗದು, ಅಲ್ಲಿಂದ ನನ್ನ ಹೆಸರು ಜಿಲ್ಲೆಯೇ ಅಲ್ಲ, ರಾಜ್ಯಾದಂತ್ಯ ಪ್ರಚಾರಕ್ಕೆ ಬಂತು ಎಂದು ಹೇಳಿದರು.

ಇವತ್ತು ನಮ್ಮ ಹಿತೈಷಿಗಳು ಸಭೆ ಕರೆದಿದ್ದೀರಿ, ಸಂತೋಷವಾಗಿದೆ, ಕಳೆದ ಮಂಡ್ಯ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಸ್ಪರ್ಧಾ ಆಕಾಂಕ್ಷಿಯಾಗಿದ್ದೆ, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಸ್ಥಾನದ ಚುನಾವಣೆಯಲ್ಲಿ



ನನ್ನ ತಮ್ಮ ರಾಘವೇಂದ್ರ ಗೆದ್ದ ಸಂದರ್ಭದಲ್ಲಿ ರಾಜ್ಯದ ಜೆಡಿಎಸ್ ವರಿಷ್ಠರಾದ ಎಚ್.ಡಿ.ಕುಮಾರಣ್ಣ ಅವರು, ನಮ್ಮನ್ನು ಮನೆ ಕರೆಸಿಕೊಂಡು, ಬಾಲಕೃಷ್ಣೇಗೌಡರನ್ನು ಅಧ್ಯಕ್ಷರನ್ನಾಗಿ ಮಾಡಲು ಬೆಂಬಲಿಸಿ, ಮುಂದಿನಗಳಲ್ಲಿ ಬೆಳೆಸುತ್ತೇನೆ. ಕ್ಷೇತ್ರದಲ್ಲಿ ಜನರೊಟ್ಟಿಗೆ ಇದ್ದು ಓಡಾಡು ಎಂದು ಮಾರ್ಗದರ್ಶನ ನೀಡಿದ್ದರು ಎಂದು ತಿಳಿಸಿದರು.

ನಮ್ಮ ಸ್ನೇಹಿತನೊಬ್ಬ ಚುನಾವಣೆಗೆ ಪಕ್ಷೇತರರಾಗಿ ಸ್ಪರ್ಧಮಾಡಿದರು, ಸ್ಪಾಭಿಮಾನಿ ಬಣದ ಪಡೆಯೊಂದಿಗೆ ಚುನಾವಣೆಯಲ್ಲಿ ಪ್ರಚಾರ ಮಾಡಲು ಮುಂದಾದೆ, ಪ್ರಾಣ ಬಿಟ್ಟವು–ಸ್ವಾಭಿಮಾನ ಬಿಡಲ್ಲ ಎಂದು ಘೋಷಣೆ ಕೂಗಿದೆವು, ಕೊನೆಯವರೆಗೂ ಚುನಾವಣೆಯಲ್ಲಿ ಪ್ರಾಮಾಣಿಕವಾಗಿ ಯಾವುದೇ ಗೇಮ್ ಇಲ್ಲದೆ ಗೆಲುವಿನಾಗಿ ದುಡಿದೆವು, ನಂತರ ದಿನಗಳ ವಿದ್ಯಮಾನದಲ್ಲಿ ರಾಜಕೀಯ ಕ್ಷೇತ್ರದಲ್ಲಿ ಕೊಂಚ ಬೆಸರವಾಯಿತು, ಉದ್ಯಮದ ಕಡೆ ತೊಡಗಿಸಿಕೊಂಡೆವು ಎಂದು ತಿಳಿಸಿದರು.

ಈ ನಡುವೆ ನಮ್ಮ ಸ್ನೇಹಿತರು, ಹಿತೈಷಿಗಳು ಆಪ್ತರು ಬಂಧು–ಬಳಗ ಸೇರಿ ನೀವು ಉದ್ಯಮದಲ್ಲಿದ್ದುಕೊಂಡು ಸಮಾಜಸೇವೆ ಮಾಡುತ್ತೀರ, ಇಲ್ಲ ಸಮಾಜಸೇವೆಗಾಗಿ ರಾಜಕೀಯ ಶಕ್ತಿಯಾಗಿ ಬೆಳೆಯುತ್ತೀರ ಎನ್ನುವ ಮಾತು,ಹೇಳಿ ಎಂದು ಒತ್ತಾಯ ಮಾಡಿ ಸಭೆ ಕರೆದಿದ್ದಾರೆ, ನನ್ನ ಆಯ್ಕೆಯನ್ನು ನನ್ನ ಬೆಂಬಲಿಗರು ಮತ್ತು ಹಿತೈಷಿಗಳಿಗೆ ಬಿಟ್ಟಿದ್ದೇನೆ ಅವರ ನಿರ್ದಾರವೇ ಅಂತಿಮ ಎಂದು ಹೇಳಿದರು.

ಕಳೆದ 4–5ದಿನಗಳ ಹಿಂದೆ ವಿ.ಸೋಮಣ್ಣ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಎಚ್.ಡಿ.ಕುಮಾರಸ್ವಾಮಿ ಅವರ ಆರೋಗ್ಯ ಕುಷಲೋಪರಿ ವಿಚಾರಿಸಲು ತೆರಳಿದಾಗ ತಮ್ಮ ಬಳಿ ಕರೆಸಿಕೊಂಡು ಚರ್ಚೆ ನಡೆಸಿದರು, ನಿಮ್ಮ ಅಭಿಮಾನಿಯಾಗಿ ಜೊತೆಗೆ ಇರುತ್ತೇನೆ, ನಮ್ಮ ಬೆಂಬಲಿಗರ ಅಭಿಪ್ರಾಯವನ್ನು ಪಡೆದು ಸೂಕ್ತ ನಿರ್ದಾರ ತಿಳಿಸುತ್ತೇನೆ ಎಂದು ಹೇಳಿ ಬಂದಿದ್ದೇನೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ನಿಮ್ಮೆಲ್ಲ ಆಶಯದಂತೆ ಮಾಜಿ ಪ್ರಧಾನಮಂತ್ರಿ ಎಚ್.ಡಿ.ದೇವೇಗೌಡ ಮತ್ತು ಎಚ್.ಡಿ.ಕುಮಾರಸ್ವಾಮಿ ಅವರ ಅಭಿಮಾನಿಯಾಗಿ ಸೇವೆ ಸಲ್ಲಿಸುತ್ತೇನೆ. ಇನ್ನು ನಾಲ್ಕೈದು ದಿನಗಳಲ್ಲಿ ಮಂಡ್ಯದಲ್ಲಿ ಹಿತೈಷಿಗಳ ಸಭೆ ಕರೆದು ನಿರ್ದಾರ ಪ್ರಕಟಿಸುತ್ತೇನೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿದ್ದ ಕೆಲವು ಮಾರ್ಗದರ್ಶಕರು ನೀವು ಜೆಡಿಎಸ್ ಅಲ್ಲೇ ಮುಂದುವರಿಯಬೇಕು ಎಂದು ಹೇಳಿದಾಗ, ನಾನು ಇದ್ದ ಪಕ್ಷದ ವಿರುದ್ಧ ವಿಧಾನಸಭಾ ಚುನಾವಣೆಯಲ್ಲಿ ಕೆಲಸ ಮಾಡಿದ್ದೇನೆ ನಾನು ವಿಕಾಪಿಕಿ ಹೋಗಿ ಪಕ್ಷದಲ್ಲಿ ನಿಲ್ಲಲು ಸ್ವಾಭಿಮಾನ ಅಡ್ಡ ಬರುತ್ತದೆ, ವಿರೋಧ ವ್ಯಕ್ತವಾಗುತ್ತದೆ. ಆದ್ದರಿಂದ ಈ ವಿಚಾರವನ್ನು ಪಕ್ಷದ ಮುಖಂಡರು ವರಿಷ್ಠರು ತೀರ್ಮಾನಿಸಬೇಕೆಂದು ತಿಳಿಸಿದರು.

ಇನ್ನು ಹಲವು ಮಾರ್ಗದರ್ಶಕರು ಬಿಜೆಪಿ ಮತ್ತು ಕಾಂಗ್ರೆಸ್ ಪಕ್ಷಕ್ಕೆ ಹೋಗಿರೆಂದು ಸಲಹೆ ನೀಡಿದರು ಎಲ್ಲರ ಅಭಿಪ್ರಾಯ ಸಲಹೆ ಸಹಕಾರ ಮಾರ್ಗದರ್ಶನ ಪಡೆದು ನಿಮ್ಮೆಲ್ಲರ ಆಸೆಯಂತೆ ನಿರ್ದಾರ ಪ್ರಕಟಿಸುವುದಾಗಿ ಸಭೆಗೆ ತಿಳಿಸಿದರು.

ಕಾರ್ಯಕ್ರಮದ ಸಭೆಯಲ್ಲಿ ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ರಾಘವೇಂದ್ರ ಮುದ್ದನಘಟ್ಟ, ಯುವ ಮುಖಂಡ ಮೋಹನ್, ಜವರೇಗೌಡ ಮುದಿಗೌಡನ ಕೊಪ್ಪಲ್, ಮಾಜಿ ಸೈನಿಕ ಅಧ್ಯಕ್ಷ ಕೃಷ್ಣೇಗೌಡ ವಡ್ಡರಕೊಪ್ಪಲು, ನಿಖಿಲ್ ಸೇನೆ ಅಧ್ಯಕ್ಷ ಶ್ರೀಧರ್ ಬಾಣಸವಾಡಿ ದೊಡ್ಡಲಿಂಗೇಗೌಡ ವಡ್ಡರಹಳ್ಳಿ, ಕನ್ನಡ ಸೇನೆ ಚಂದ್ರು ಮುದಿಗೌಡನಕೊಪ್ಪಲು, ಶಿವಾರಾಮಣ್ಣ ಜೆಲ್ಲನಾಯಕನಹಳ್ಳಿ, ಶಂಕರೇಗೌಡ ಜೆಲ್ಲನಾಯಕನಹಳ್ಳಿ, ಬಸರಾಳು ಪಂಚಾಯತ್ ನಿಕಟ ಪೂರ್ವ ಅಧ್ಯಕ್ಷೆ ಪವಿತ್ರಮಾರ್ಕಿ, ಮಾಜಿ ಅಧ್ಯಕ್ಷೆ ಗೌರಮ್ಮ, ಗ್ರಾಮ ಪಂಚಾಯತಿ ಸದಸ್ಯ ರವಿ ಮುದ್ದನಘಟ್ಟ ಗ್ರಾಮ್ ಪಂಚಾಯತಿ ಮಾಜಿ ಸದಸ್ಯ ಜವರೇಗೌಡ ಮುದಿಗೌಡನಕೊಪ್ಪಲು, ಆಪ್ತರು ಬೆಂಬಲಿಗರು ಮುಖಂಡರು ಭಾಗವಹಿಸಿದ್ದರು.

ಏ.1ರಿಂದ ಕಾಲುಬಾಯಿ, ಜ್ವರ, ಲಸಿಕಾ ಕಾರ್ಯಕ್ರಮ

■ ಕಾಯಕಯೋಗಿ ಸುದ್ದಿ

ಮದ್ದೂರು: ರಾಷ್ಟ್ರೀಯ ಜಾನುವಾರು ರೋಗನಿಯಂತ್ರಣ ಕಾರ್ಯಕ್ರಮದಡಿ 5ನೇ ಸುತ್ತಿನ ಕಾಲುಬಾಯಿ, ಜ್ವರ, ಲಸಿಕಾ ಕಾರ್ಯಕ್ರಮ ಹಮ್ಮಿಕೊಂಡಿರುವುದಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕ ಡಾ॥ ಪ್ರವೀಣ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏ.1 ರ ಸೋಮವಾರದಿಂದ ಏ.30ರ ವರೆಗೆ ತಾಲೂಕಿನಾದ್ಯಂತ ಜಾನುವಾರುಗಳಿಗೆ ಮಂಡ್ಯ ಹಾಲು ಒಕ್ಕೂಟ, ಪಶುಪಾಲನಾ ಇಲಾಖೆ, ವತಿಯಿಂದ ಕಾಲುಬಾಯಿ, ಜ್ವರ, ಲಸಿಕಾ ಕಾರ್ಯಕ್ರಮ ಹಮ್ಮಿಕೊಂಡಿದ್ದು ತಾಲೂಕಿನಲ್ಲಿರುವ 161 ಗ್ರಾಮಗಳಿಗೆ ಸುಮಾರು 57510 ಹಸುಗಳು, 18150 ಎಮ್ಮೆಗಳಿಗೆ ಉಚಿತವಾಗಿ ಲಸಿಕೆ ಹಾಕುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಲಸಿಕಾ ಕಾರ್ಯಕ್ರಮಕ್ಕೆ 74 ಮಂದಿ ಲಸಿಕೆದಾರನ್ನು 37 ತಂಡಗಳನ್ನಾಗಿ ನೇಮಿಸಿದ್ದು ಪ್ರತಿ ತಂಡವೂ ನಿಗದಿತ ದಿನಾಂಕದಂದು ಆಯಾ ಗ್ರಾಮಕ್ಕೆ ಬೆಳಿಗ್ಗೆ 6 ಗಂಟೆಯಿಂದ ಪ್ರತೀ ದಿನ ರೈತರ ಮನೆ ಬಾಗಿಲಿಗೆ ತೆರಳಿ ಜಾನುವಾರುಗಳಿಗೆ ಲಸಿಕೆ ನೀಡಲಿದ್ದಾರೆ.

ತಾಲೂಕಿನ ರೈತಾಪಿ ಮಿತ್ರರು ತಪ್ಪದೇ ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿ ರೋಗ ನಿರ್ಮೂಲನೆಗೆ ಸಹಕರಿಸಬೇಕೆಂದು ಕೋರಿದ್ದಾರೆ.

ದಿನನಿತ್ಯದ ವಸ್ತು ಸಂಗ್ರಹಿಸುವ ಗೋಡೌನ್‌ಗಳ ಪರಿಶೀಲನೆಗೆ ಸೂಚನೆ

■ ಕಾಯಕಯೋಗಿ ಸುದ್ದಿ

ಮಂಡ್ಯ: ಬಟ್ಟೆ ದಿನನಿತ್ಯ ಉಪಯೋಗಿಸುವ ಎಲೆಕ್ಟ್ರಾನಿಕ್ ಸರಕು ಹಾಗೂ ಇನ್ನಿತರೆ ವಸ್ತುಗಳನ್ನು ಸಂಗ್ರಹಿಸುವ ಗೋಡೌನ್‌ಗಳಲ್ಲಿ ಪರಿಶೀಲನೆ ನಡೆಸಿ ಎಂದು ವೆಚ್ಚ ವೀಕ್ಷಕರಾದ ರೋಹಿತ್ ಆಸುದಾನಿ ಮತ್ತು ಕುಮಾರ್ ಪ್ರಿಯತಮ್ ಅಶೋಕ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿ ಆದಾಯ ತೆರಿಗೆ, ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿ, ಸರಕುಗಳ ಸಾಗಾಣಿಕೆಗೆ ಸಂದರ್ಭದಲ್ಲಿ ಬಿಲ್‌ತಾಳೆ ಮಾಡುತ್ತಿರುವುದು ಸರಿಯಷ್ಟೆ ಇದರೊಂದಿಗೆ ಗೋಡೌನ್‌ಗಳಲ್ಲಿ ಅನಿರೀಕ್ಷಿತ ದಾಳಿಗಳನ್ನು ನಡೆಸಿ ಎಂದರು.

ಅನಧಿಕೃತ ಮದ್ಯ ಸಾಗಾಣಿಕೆ ಬಗ್ಗೆ ನಿಗಾ ವಹಿಸಿ ಅನಧಿಕೃತವಾಗಿ ಮದ್ಯ ಸಾಗಾಣಿಕೆ



ಹಾಗೂ ಸಂಗ್ರಹಣೆಯ ಬಗ್ಗೆ ವಿವಿಧ ತಂಡಗಳು ಹೆಚ್ಚು ನಿಗಾ ವಹಿಸಬೇಕು. ಸೂಕ್ಷ್ಮ ಸ್ಥಳಗಳಲ್ಲಿರುವ ಮದ್ಯದ ಅಂಗಡಿಗಳನ್ನು ಪಟ್ಟವರಾಡಿಕೊಂಡು ಅಬಕಾರಿ ಇಲಾಖೆಯವರು ತೀವ್ರ ಗಮನ ಹರಿಸಬೇಕು ಎಂದರು.

ಬ್ಯಾಂಕ್ ವಹಿವಾಡಿನ ಮೇಲೆ ನಿಗಾ, ಬ್ಯಾಂಕ್ ಖಾತೆಗಳಲ್ಲಿ ನಡೆಯುವ ಸಂಶಯಾಸ್ಪದ ವಿವಾಟು, ಹತ್ತು ಲಕ್ಷಕ್ಕಿಂತ ಹೆಚ್ಚಿನ ಹಣ ವರ್ಗಾವಣೆ, ಒಂದು ಖಾತೆಯಿಂದ 10ಕ್ಕಿಂತ ಹೆಚ್ಚಿನ ಖಾತೆಗೆ ಹಣ ವರ್ಗಾವಣೆ ಕುರಿತಂತೆ ಪ್ರತಿದಿನ ಪರಿಶೀಲನೆ ನಡೆಸಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ.ಕುಮಾರ ಅವರು ಆಕ್ಸಿಂಟಿಂಗ್ ಟೀಂನವರು ಶುಡೋ ರಿಜಿಸ್ಟರ್, ಪೋಲ್ಡರ್ ಆಫ್ ಎವಿಡೆನ್ಸ್ ಸೇರಿದಂತೆ ವಿವಿಧ ಕಡತ ನಿರ್ವಹಣೆಯ ಬಗ್ಗೆ, ರಾಜಕೀಯ ಪಕ್ಷಗಳಿಗೆ ಪ್ರಚಾರಕ್ಕಾಗಿ ಅನುಮತಿ ನೀಡಲು ತೆರೆದಿರುವ ಏಕಗವಾಕ್ಷಿ ಕೇಂದ್ರ ಸೇರಿದಂತೆ ಮಾಡಿಕೊಂಡಿರುವ ವ್ಯವಸ್ಥೆಗಳ ಬಗ್ಗೆ ವಿವರಿಸಿದರು.

ಸಭೆಯ ನಂತರ ವೆಚ್ಚ ವೀಕ್ಷಕರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿತವಾಗಿರುವ ಕಂಟ್ರೋಲ್ ರೂಂ. ಮಾಧ್ಯಮ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಜಿಲ್ಲಾಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಸಭೆಯಲ್ಲಿ ಎಸ್ಪಿ ಎನ್.ಯತೀಶ್, ಆದಾಯ ತೆರಿಗೆ ಇಲಾಖೆ ಅಧಿಕಾರಿ ಮಹಮ್ಮದ್ ಇದಾಯತ್ ಉಸೇನ್, ಅಪರ ಜಿಲ್ಲಾಧಿಕಾರಿ ಡಾ.ಎಚ್.ಎಲ್.ನಾಗರಾಜು ಇದ್ದರು.

ಶ್ರೀಸಣ್ಣಕ್ಕಿರಾಯಸ್ವಾಮಿ ಬಸವಪ್ಪನ ವಿಜೃಂಭಣೆ ಆರಾಧನಾ ಮಹೋತ್ಸವ

■ ಕಾಯಕಯೋಗಿ ಸುದ್ದಿ

ಭಾರತೀನಗರ: ಇಲ್ಲಿಗೆ ಸಮೀಪದ ದೊಡ್ಡರಸಿನಕೆರೆ ಗ್ರಾಮದಲ್ಲಿರುವ ಶ್ರೀಸಣ್ಣಕ್ಕಿ ರಾಯಸ್ವಾಮಿ ದೇವಾಲಯದಲ್ಲಿ ಬಸವಪ್ಪನ 11 ನೇ ದಿನದ ಆರಾಧನಾ ಮಹೋತ್ಸವ ಭಕ್ತ ಸಾಗರದೊಂದಿಗೆ ನೆರವೇರಿತು.

ಮಾ.19 ರಂದು ಲಿಂಗೈಕ್ಯವಾಗಿದ್ದ ಶ್ರೀ ಸಣ್ಣಕ್ಕಿರಾಯಸ್ವಾಮಿ ಬಸವಪ್ಪನ ಸಮಾಧಿಗೆ ವಿವಿಧ ಪುಷ್ಪಗಳಿಂದ ಅಲಂಕರಿಸಿ ಬಸವಪ್ಪನ ಭಾವಚಿತ್ರವನ್ನಿಟ್ಟು ಪೂಜಾಕೈಂಕರ್ಯಗಳನ್ನು ನೆರವೇರಿಸಿ ಹಾಲು–ಪುಷ್ಪವನ್ನು ಬಿಡಲಾಯಿತು. ರಾಮನಗರ ಜಿಲ್ಲೆಯ ಕವಣಪುರ ಶ್ರೀ ಬಸವೇಶ್ವರ ಬಸವಪ್ಪ, ತಿಟ್ಟಮೇಲನಹಳ್ಳಿ ಶ್ರೀಲಕ್ಷ್ಮಿದೇವಿ ಬಸವಪ್ಪ, ದೊಡ್ಡರಸಿನಕೆರೆ ಶ್ರೀಬೋರೇದೇವರ ಬಸವಪ್ಪಗಳು ಈ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದವು.

ದಿವ್ಯಸಾನ್ನಿಧ್ಯ ವಹಿಸಿದ್ದ ಶ್ರೀರಂಗಪಟ್ಟಣದ ಬೇವಿಮಠ ಚಿಂದ್ರವನ ಆಶ್ರಮದ ಪೀಠಾಧ್ಯಕ್ಷ ಶ್ರೀನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿ



ಅವರು ಮಾತನಾಡಿ, ಶ್ರೀಸಣ್ಣಕ್ಕಿರಾಯಸ್ವಾಮಿ ಬಸವಪ್ಪ ರಾಜ್ಯಕ್ಕೆ ಪ್ರಸಿದ್ಧಿಗೊಂಡಿತ್ತು. ನಾನು ಕಂಡ ಬಸವಪ್ಪಗಳಲ್ಲಿ ಈ ಬಸವಪ್ಪ ಅತೀ ಶ್ರೇಷ್ಠ ಬಸವಪ್ಪನಾಗಿತ್ತು ಶ್ರೀಸಣ್ಣಕ್ಕಿರಾಯಸ್ವಾಮಿ ಬಸವಪ್ಪ ಬರೀ ಬಸವಪ್ಪನಾಗಿ ಉಳಿದಿರಲಿಲ್ಲ. ಪವಾಡ ಬಸವಪ್ಪನಾಗಿ ಉಳಿದು ಹೋದ. ಬಸವಪ್ಪನ ದೇಹ ಮಾತ್ರ ಹೋಗಿದೆ. ಅವನು ಮಾಡಿರುವ ಸಾಧನೆ ಅಚ್ಚಹಸಿರಾಗಿ ಉಳಿದುಕೊಂಡಿದೆ. ಯಾರು ಬಸವಪ್ಪನನ್ನು ನಂಬಿಕೊಂಡಿದ್ದರೋ ಅಂತವರಿಗೆ ಚಿರಸ್ಮರಣೆಯಾಗಿ ಉಳಿದುಕೊಂಡಿದೆ ಎಂದರು.

ನನಗೆ ಹೆಚ್ಚು ಬಾಂಧವ್ಯ ಇದ್ದಂತಹ ಬಸವಪ್ಪ ಲಿಂಗೈಕ್ಯನಾಗಿರುವ ವಿಷಯ ತಿಳಿದು ನನಗೆ ಅಘಾತ ಉಂಟಾಯಿತು. ನಾನು ಬೆಳಗಾಂನಲ್ಲಿ ಇದ್ದ ಕಾರಣ ನಾನು ಬರಲು ಸಾಧ್ಯವಾಗಲಿಲ್ಲ ಎಂದು ದುಃಖಿಸಿದರು. ನನಗೆ ಎಷ್ಟೇ ಒತ್ತಡವಿದ್ದರೂ ಈ ಕ್ಷೇತ್ರಕ್ಕೆ ಬರುತ್ತಿದ್ದೇನೆ ಎಂದರೆ ಇಲ್ಲಿರುವಂತಹ ಸಂಬಂಧ, ಪ್ರೀತಿಗಾಗಿ ಎಂದರು. ಕನಕಪುರ ಗುರುವಿನಪುರ ಮಠದ ಜಗದೀಶ್ ಶಿವಾಚಾರ್ಯಸ್ವಾಮೀಜಿ, ಮಡೇನಹಳ್ಳಿ ತೋಂಟದಾರ್ಯ ಮಠದ ಅರುಣಾಚಲ ಸ್ವಾಮೀಜಿ ಅವರು ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಸಾವಿರಾರು ಭಕ್ತಾದಿಗಳಿಗೆ ಮಧ್ಯಾಹ್ನ 12 ಗಂಟೆಯಿಂದ ಸಂಜೆ 5 ಗಂಟೆಯ ವರೆವಿಗೂ ಅನ್ನಸಂತರ್ಪಣಾ ಕಾರ್ಯಕ್ರಮ ಜರುಗಿತು. ಮಳವಳ್ಳಿ ಡಾ.ಎಂ.ಮಹದೇವ ಸ್ವಾಮಿ ತಂಡದವರಿಂದ ಗೀತಸಮನ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಶ್ರೀಸಣ್ಣಕ್ಕಿರಾಯಸ್ವಾಮಿ ಬಸವಪ್ಪ ಸಮಿತಿಯ ಪದಾಧಿಕಾರಿಗಳಾದ ಡಿ.ಎಂ. ಮಂಚೇಗೌಡ, ಡಿ.ಎಸ್.ಆನಂದ್, ಶರತ್, ಪುರುಷೋತ್ತಮ್, ಡಿ.ಸಿ.ನಾಗೇಂದ್ರ, ಡಿ.ಬಿ. ರಾಘವೇಂದ್ರ, ಡಿ.ಎಂ.ರಾಜು ಸೇರಿದಂತೆ ಹಲವರಿದ್ದರು.

ಹಲಗೂರು ಪೊಲೀಸ್ ಠಾಣೆ ವತಿಯಿಂದ ಸಾರ್ವಜನಿಕರಿಗೆ ಮತದಾನ ಜಾಗೃತಿ ಸಭೆ



■ ಕಾಯಕಯೋಗಿ ಸುದ್ದಿ

ಹಲಗೂರು:ಇಲ್ಲಿನ ಕರ್ನಾಟಕ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ಹಲಗೂರು ಪೊಲೀಸ್ ಠಾಣೆಯ ವತಿಯಿಂದ ಸಾರ್ವಜನಿಕರಿಗೆ ಆಯೋಜಿಸಿದ್ದ ಮತದಾನ ಜಾಗೃತಿ ಸಭೆ ನಡೆಯಿತು.

ಹೆಚ್ಚ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–3 | 30–03–2024

ಮೈಸೂರು

ಕೋಟ್ಯಾಧಿಪತಿ ನಂಜನಗೂಡು ಶ್ರೀ ನಂಜುಂಡೇಶ್ವರ; 1.78 ಕೋಟಿ ಸಂಗ್ರಹ

■ ಕಾಯಕಯೋಗಿ ಸುದ್ದಿ

ನಂಜನಗೂಡು: ದಕ್ಷಿಣ ಕಾಶಿ ನಂಜನಗೂಡು ಶ್ರೀ ನಂಜುಂಡೇಶ್ವರ ಸ್ವಾಮಿ ದೇವಾಲಯದಲ್ಲಿ ಹುಂಡಿ ಎಣಿಕೆ ಕಾರ್ಯವನ್ನು ನಡೆಸಲಾಯಿತು. ಮತ್ತೆ ನಂಜನಗೂಡು ಶ್ರೀ ನಂಜುಂಡೇಶ್ವರ ಕೋಟ್ಯಾಧಿಪತಿಯಾಗಿದ್ದಾನೆ. ಸುಮಾರು ಒಂದು 1.78 ಕೋಟಿ ರೂ. ಹಣ ಸಂಗ್ರಹವಾಗಿದೆ. ದೇವಾಲಯದ ದಾಸೋಹ ಭವನದಲ್ಲಿ ಸುಮಾರು 34 ಹುಂಡಿಗಳ ಎಣಿಕೆ ಕಾರ್ಯವನ್ನು ನಡೆಸಲಾಗಿದ್ದು, ಈ ಬಾರಿ ನಂಜನಗೂಡು ಶ್ರೀ ನಂಜುಂಡೇಶ್ವರ ಸ್ವಾಮಿಯ ಗೌತಮ ಪಂಚ ಮಹಾ ರಥೋತ್ಸವ ಹಾಗೂ ಹುಣ್ಣಿಮೆಯಲ್ಲಿ ಅತಿ ಹೆಚ್ಚಾಗಿ ಭಕ್ತಾದಿಗಳು ದೇವಾಲಯಕ್ಕೆ ಆಗಮಿಸಿದ್ದರು.

ಈ ಹಿನ್ನೆಲೆಯಲ್ಲಿ 1.78.29, 667 ರೂ.ಗಳು ಸಂಗ್ರಹವಾಗಿದ್ದು, 123 ಗ್ರಾಂ 800 ಮಿಲಿ ಗ್ರಾಂ ಚಿನ್ನ, 4 ಕೆಜಿ 600 ಗ್ರಾಂ ಬೆಳ್ಳಿ, 26 ವಿದೇಶಿ ಕರೆನ್ಸಿಗಳು ನಂಜುಂಡೇಶ್ವರನಿಗೆ ಕಾಣಿಕೆಯಾಗಿ ಬಂದಿದೆ. ದೇವಾಲಯದ



ಕಾರ್ಯನಿರ್ವಾಹಕ ಅಧಿಕಾರಿ ಜಗದೀಶ್ ಕುಮಾರ್, ಬ್ಯಾಂಕ್ ಮ್ಯಾನೇಜರ್ ಲಕ್ಷ್ಮಿ, ಸೇರಿದಂತೆ ಸ್ವಸಹಾಯ ಸಹಾಯಕ ಕಾರ್ಯನಿರ್ವಾಹಕ ಅಧಿಕಾರಿ ವೆಂಕಟೇಶ್ ಸಂಘದ ಮಹಿಳೆಯರು ಎಣಿಕೆ ಕಾರ್ಯದಲ್ಲಿ ಪ್ರಸಾದ್, ಎಇಒ ಸತೀಶ್, ಇಒ ಕೃಷ್ಣ, ಕೆನರಾ ಭಾಗವಹಿಸಿದ್ದರು.

ಅಭ್ಯರ್ಥಿಗಳ ಖರ್ಚು ವೆಚ್ಚಗಳ ಬಗ್ಗೆ ನಿಗಾ ವಹಿಸಿ: ಯೋಗೇಶ್ ಮಿಶ್ರ

■ ಕಾಯಕಯೋಗಿ ಸುದ್ದಿ

ಮೈಸೂರು: ಮೈಸೂರು ಕೊಡಗು ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ಪ್ರಚಾರಕ್ಕಾಗಿ ಮೆಚ್ಚ ಮಾಡುವ ಹಣದ ಬಗ್ಗೆ ಪ್ರತಿ ದಿನ ನಿಗಾ ವಹಿಸಿ ವರದಿ ಸಲ್ಲಿಸುವಂತೆ ಚಾಮುಂಡೇಶ್ವರಿ ನರಸಿಂಹರಾಜ, ಚಾಮರಾಜ ಹಾಗೂ ಕೃಷ್ಣರಾಜ ಕ್ಷೇತ್ರಗಳಿಗೆ ಮೆಚ್ಚ ವೀಕ್ಷಕರಾಗಿರುವ ಯೋಗೀಶ್ ಮಿಶ್ರ ಅವರು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 4 ಕ್ಷೇತ್ರಗಳ ಸಹಾಯಕ ಮೆಚ್ಚ ವೀಕ್ಷಕರ ತಂಡದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಸಭೆ ನಡೆಸಿ ಮಾತನಾಡಿದರು.

ಚುನಾವಣಾ ಕೆಲಸಕ್ಕಾಗಿ ನೇಮಕವಾಗಿರುವ ಎಫ್.ಎಸ್.ಟಿ, ಎಸ್.ಎಸ್.ಟಿ, ವಿ.ವಿ.ಟಿ ಹಾಗೂ ಇನ್ನಿತರೆ ತಂಡಗಳು ಜವಾಬ್ದಾರಿಯುತವಾಗಿ ಕೆಲಸ ನಡೆಸಿ ಅಭ್ಯರ್ಥಿಯು ಚುನಾವಣಾ ಆಯೋಗ ನೀಡಿರುವ ನಿರ್ದೇಶನಗಳನ್ನು ಪಾಲಿಸುತ್ತಿರುವ ಬಗ್ಗೆ ನಿಗಾ ವಹಿಸಬೇಕು ಎಂದರು.

ಯಾವುದೇ ರೀತಿಯ ಗೊಂದಲಗಳಿದ್ದಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಪರಿಹರಿಸಿಕೊಳ್ಳಬೇಕು ಎಂದರು.

ಹಣದ ಬಲದ ಮೇಲೆ ಚುನಾವಣೆ ನಡೆಯಬಾರದು. ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ಚುನಾವಣೆ ನಡೆಯಬೇಕು. ಚೆಕ್ ಪೋಸ್ಟ್ ಗಳಲ್ಲಿ ತಪಾಸಣೆಯನ್ನು ತೀವ್ರಗೊಳಿಸಿ ದಾಖಲೆ ರಹಿತ ಹಣ ಅಥವಾ ಇನ್ನಿತರೆ ವಸ್ತುಗಳು ಸಾಗಾಣಿಕೆಯಾಗದಂತೆ ನೋಡಿಕೊಳ್ಳಿ ಎಂದರು.

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಅಭ್ಯರ್ಥಿಗಳ



ಚುನಾವಣಾ ಮೆಚ್ಚ ನಿರ್ವಹಿಸಲು ನೇಮಕವಾಗಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

ಬ್ಯಾಂಕ್ ವಹಿವಾಟಿನ ಮೇಲೆ ನಿಗಾ: ಬ್ಯಾಂಕ್ ಖಾತೆಗಳಲ್ಲಿ ನಡೆಯುವ ಸಂಶಯಾಸ್ಪದ ವಹಿವಾಟು, ಹತ್ತು ಲಕ್ಷಕ್ಕಿಂತ ಹೆಚ್ಚಿನ ಹಣ ವರ್ಗಾವಣೆ, ಒಂದು ಖಾತೆಯಿಂದ 10 ಕ್ಕಿಂತ ಹೆಚ್ಚಿನ ಖಾತೆಗೆ ಹಣ ವರ್ಗಾವಣೆ ಕುರಿತಂತೆ ಪ್ರತಿದಿನ ಪರಿಶೀಲನೆ ನಡೆಸಬೇಕು ಎಂದರು.

ಜಿಲ್ಲಾಧಿಕಾರಿ ಡಾ ಕೆ.ವಿ.ರಾಜೇಂದ್ರ ಅವರು ಮಾತನಾಡಿ ಜಿಲ್ಲೆಯಲ್ಲಿ ಚುನಾವಣಾ ಕೆಲಸಕ್ಕಾಗಿ ನೇಮಕವಾಗಿರುವ ವಿವಿಧ ತಂಡಗಳು, ಅಧಿಕಾರಿಗಳು, ಸ್ಥಾಪನೆಯಾಗಿರುವ ಚೆಕ್ ಪೋಸ್ಟ್ ಗಳು ಹಾಗೂ ಇನ್ನಿತರೆ ಮಾಹಿತಿಗಳನ್ನು ವಿವರಿಸಿದರು.

ಸಭೆಯ ನಂತರ ಚುನಾವಣಾ ಮೆಚ್ಚ ವೀಕ್ಷಕರು ಜಿಲ್ಲಾ ಚುನಾವಣಾ ಮೆಚ್ಚ ಮೇಲ್ವಿಚಾರಕರ ಕೋಶಕ್ಕೆ, ಜಿಲ್ಲಾ ಮಾಧ್ಯಮ ದೃಢೀಕರಣ ಹಾಗೂ ಉಸ್ತುವಾರಿ ಸಮಿತಿ ಕೇಂದ್ರಕ್ಕೆ ಭೇಟಿ ನೀಡಿ ವ್ಯವಸ್ಥೆಗಳ ಬಗ್ಗೆ ಪರಿಶೀಲಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಎಂ.ಗಾಯಿತ್ರಿ, ಡಿವೈಎಸ್ಪಿ ಮುತ್ತುರಾಜ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಮಾ. 31 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮೈಸೂರು: ರಾಮಕೃಷ್ಣನಗರ ಉಪವಿಭಾಗದ ದೂರವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ಟಿ. ಕಾಟೂರು ಐಪಿ ವಿದ್ಯುತ್ ಮಾರ್ಗದಲ್ಲಿ ನಿರ್ವಹಣಾ ಕೆಲಸದ ನಿಮಿತ್ತ ಮಾ. 31 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಟಿ.ಕಾಟೂರು, ಮಾರ್ಬಳ್ಳಿ, ಉದ್ಬೂರು ಗ್ರಾಮಗಳ ವ್ಯಾಪ್ತಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುವುದರಿಂದ, ಸಾರ್ವಜನಿಕರು ಸಹಕರಿಸಬೇಕೆಂದು ಪಿ.ವಿ ಮೊಹಲ್ಲಾ ವಿಭಾಗದ, ಕಾರ್ಯನಿರ್ವಾಹಕ ಇಂಜಿನಿಯರ್(ಪಿ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

"ಬನ್ನಿಕುಪ್ಪೆಯಲ್ಲಿ ಅದ್ದೂರಿ ಕನ್ಯೆಕರಡಿ ಉತ್ಸವ"



■ ಕಾಯಕಯೋಗಿ ಸುದ್ದಿ

ಬನ್ನಿಕುಪ್ಪೆ: ಬನ್ನಿಕುಪ್ಪೆ ಗ್ರಾಮದ ಗ್ರಾಮ ದೇವತೆಯಾದ ಶ್ರೀ ಬನ್ನಮ್ಮನವರ ಕನ್ಯೆಕರಡಿ ಉತ್ಸವವು ಇಂದು ಲಕ್ಷ್ಮತೀರ್ಥ ನದಿಯಿಂದ ಹೋಮ ಅವನ ಪೂಜೆಗಳನ್ನು ಮುಗಿಸಿ ಮರದೂರು ಹೊಸೂರು ಮಾರ್ಗ ಬನ್ನಿಕುಪ್ಪೆ ಗೇಟ್ ಮುಖಾಂತರ ಭಕ್ತಾದಿಗಳು ವೇಷಭೂಷಣ, ಬರ್ಜಿ, ಉಡುಗೆ ತೊಡಿಗೆ ಹಾಗೂ ಇನ್ನಿತರ ಮನರಂಜನ ಮಂಗಳವಾದ್ಯಗಳೊಂದಿಗೆ ಬನ್ನಿಕುಪ್ಪೆಯ ಮುಖ್ಯರಸ್ತೆಯಲ್ಲಿ ಮೆರವಣಿಗೆ ನಡೆಸುತ್ತಾ ಸಾವಿರಾರು ಮಂದಿ ಬನ್ನಮ್ಮ ತಾಯಿಗೆ ಹಣ್ಣು ಜವನವನ್ನು ಎಸೆದು ಬಾಯಿಬೀಗ, ಹಸುಕುರುಗಳ ಸೇವೆ, ಪಂಜಿನ ಸೇವೆ, ಗಂಧದ ಸೇವೆ ಇತ್ಯಾದಿಗಳನ್ನು ಮಾಡುತ್ತ ಕಾಡುಗುಡಿ ಎಂಬ ಹೊಯ್ಸಳರ ಕಾಲದ ದೇವಸ್ಥಾನದ ಗರ್ಭಗುಡಿಗೆ ತಾಯಿಯನ್ನು ಉಯ್ಯಾಲೆಯಲ್ಲಿ ಕೂರಿಸಿ ಸಿಂಗರಿಸಿ ಮತ್ತು ಗಂಧದ ಮಜ್ಜನವನ್ನು ಮಾಡಿಸಿ 8 ಹಳ್ಳಿಯ ಭಕ್ತಾದಿಗಳ ಸಮ್ಮುಖದಲ್ಲಿ ದೇವಿಯನ್ನು ಗರ್ಭಗುಡಿಯಲ್ಲಿ ಇರಿಸಲಾಯಿತು. ನಂತರ ಪ್ರಸಾದ ವಿನಿಯೋಗ ಮಾಡಲಾಯಿತು.

ಕಾರ್ಯಕ್ರಮದಲ್ಲಿ 8 ಹಳ್ಳಿಯ ಯಜಮಾನ ಕೂಸಪ್ಪ ಗ್ರಾಮ ಪಂಚಾಯತಿ ಅಧ್ಯಕ್ಷ ಗೋವಿಂದನಾಯಕ್ ಬಿ.ಆರ್, ಕಾರ್ಯದರ್ಶಿ ವೇದಮೂರ್ತಿ ಸಿ.ಎಸ್, ಪಿ.ಎಸ್.ಎಸ್ ನಿರ್ದೇಶಕ ಗೋವಿಂದಗೌಡ, ಮುಖಂಡರಾದ ಲೋಕೇಶ್‌ನಾಯಕ್, ಚಿಕ್ಕಸ್ವಾಮಿ, ಪ್ರಸನ್ನಕುಮಾರ್, ದೀಪು, ಕೆಂಗಯ್ಯ, ಗಣೇಶನಾಯಕ, ಅಯ್ಯಣ್ಣ, ಸುರೇಶ ಹಾಗೂ 8 ಹಳ್ಳಿಯ ಗ್ರಾಮಸ್ಥರು, ಭಕ್ತಾದಿಗಳು, ಮುಖಂಡರು ಭಾಗವಹಿಸಿದ್ದರು.

ಲೋಕಸಭಾ ಚುನಾವಣೆ: ವೆಚ್ಚ ವೀಕ್ಷಕರ ನೇಮಕ

ಮೈಸೂರು: 2024ನೇ ಸಾಲಿನ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಚುನಾವಣಾ ವೆಚ್ಚ ವೀಕ್ಷಕರನ್ನಾಗಿ ಯೋಗೀಶ್ ಮಿಶ್ರಾ (ಐ.ಆರ್.ಎಸ್.) ಹಾಗೂ ಡಾ ಎಂ.ಮೋಹನ್ ಬಾಬು (ಐ.ಆರ್.ಎಸ್.) ಅವರನ್ನು ನೇಮಕ ಮಾಡಲಾಗಿದೆ.ಯೋಗೀಶ್ ಮಿಶ್ರಾ (ಐ.ಆರ್ ಎಸ್) ಚುನಾವಣೆ ವೆಚ್ಚ ವೀಕ್ಷಕರು (ಚಾಮುಂಡೇಶ್ವರಿ ಕೃಷ್ಣರಾಜ,ಚಾಮರಾಜ ಮತ್ತು ನರಸಿಂಹರಾಜ ವಿಧಾನಸಭಾ ಕ್ಷೇತ್ರ) *ಇವರನ್ನು 9482058477 ಮೂಲಕ ಸಂಪರ್ಕಿಸಬಹುದಾಗಿದೆ. ಡಾ. ಎಂ ಮೋಹನ್ ಬಾಬು (ಐ.ಆರ್. ಎಸ್) ಚುನಾವಣೆ ವೆಚ್ಚ ವೀಕ್ಷಕರು (ಚಾಮರಾಜನಗರ ಲೋಕಸಭಾ ಕ್ಷೇತ್ತ ವರುಣ,ನಂಜನಗೂಡು ಟಿ. ನರಸಿಪುರ ಮತ್ತು ಎಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರ) *ಇವರನ್ನು ಮೊಬೈಲ್ ಸಂಖ್ಯೆ 9481687450 ಮೂಲಕ ಸಂಪರ್ಕಿಸಬಹುದು.

ಯುವ ಮತದಾರರು ತಪ್ಪದೇ ಮತ ಚಲಾಯಿಸಿ

■ ಕಾಯಕಯೋಗಿ ಸುದ್ದಿ

ಮೈಸೂರು: ಯುವ ಮತದಾರರ ಮುಕ್ತ ಹಾಗೂ ನ್ಯಾಯೋಚಿತವಾದ ಚುನಾವಣೆಯನ್ನು ಬೆಂಬಲಿಸಬೇಕು. ಏ.26ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ತಪ್ಪದೇ ಮತ ಚಲಾಯಿಸಬೇಕು ಎಂದು ಸಹಾಯಕ ಚುನಾವಣಾಧಿಕಾರಿ ಕುಮುದಾ ಶರತ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಹೆಚ್.ಡಿ.ಕೋಟೆ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಚುನಾವಣೆ–2024ರ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ಯುವ ಮತದಾರರ ಮತದಾನ ಜಾಗೃತಿ ಹಾಗೂ ಹಸ್ತಾಕ್ಷರ ಸಂಗ್ರಹ ಅಭಿಯಾನವನ್ನು ಉದ್ಘಾಟಿಸಿದರು.

ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಧರಣೇಶ್ ಎಸ್.ಪಿ ಅವರು ಮಾತನಾಡಿ, ಯಾವುದೇ ಆಸೆ ಆಮಿಷಗಳಿಗೆ ಯುವ ಮತದಾರರ ಒಳಗಾಗದೆ ಪ್ರಜಾ ಪ್ರಜಾ ಪ್ರಭುತ್ವವನ್ನು ಬಲಪಡಿಸಲು ತಪ್ಪದೇ



ಮತದಾನ ಮಾಡಬೇಕು. ಜೊತೆಗೆ ತಮ್ಮ ಕುಟುಂಬದವರು, ನೆರೆಹೊರೆಯವರು, ಸಂಬಂಧಿಕರು ಹಾಗೂ ಮತದಾನದ ಬಗ್ಗೆ ಅಸಡ್ಡೆ ತೋರುವವರನ್ನು ಪ್ರೇರೇಪಿಸಿ ಮತಗಟ್ಟೆಗೆ ಕರೆದುಕೊಂಡು ಹೋಗಿ ಮತದಾನ ಮಾಡಿಸಬೇಕು.

ಮತದಾನ ಮಾಡುವ ಪ್ರತಿಯೊಬ್ಬ ಯುವಕರಿಗೆ ಮೊದಲು ಮತದಾನ ಮಾಡುವ ದಿನದ ಬಗ್ಗೆ ಅರಿವು ಇರಬೇಕು. ಜೊತೆಗೆ ಗಿಳಿಯೂ (ವೋಟರ್ ಹೆಲ್ಪ್ ಲೈನ್ ಆಪ್) ನಲ್ಲಿ ನಿಮ್ಮ ಮತಗಟ್ಟೆಗಳ ಬಗ್ಗೆ ಮಾಹಿತಿ ತಿಳಿದುಕೊಳ್ಳಬಹುದು ಎಂದು ತಿಳಿಸಿದರು.

ವಿದ್ಯಾರ್ಥಿಗಳೇ ಭಾರತದ ಮುಂದಿನ ಭವಿಷ್ಯದ ಪ್ರಜೆಗಳು" "ವಿದ್ಯಾರ್ಥಿಗಳ ನಡೆ –ಮತಗಟ್ಟೆಯ ಕಡೆ" ಇರಬೇಕು. ಆದ್ದರಿಂದ ಎಲ್ಲರೂ ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಸಾಂವಿಧಾನಿಕ ಹಕ್ಕನ್ನು ನಿರ್ಭೀತಿಯಿಂದ ಚಲಾಯಿಸಬೇಕು ಕಿವಿಮಾತು ಹೇಳಿದರು.


ಮೊದಲ ಬಾರಿಗೆ ಮತದಾನ ಮಾಡುವ ವಿದ್ಯಾರ್ಥಿನಿ ಶಿಲ್ಪಾ ಅವರು, ಮೊದಲ ಬಾರಿಗೆ ಮತದಾನ ಮಾಡಲು ತುಂಬಾ ಉತ್ಸುಕಳಾಗಿದ್ದೇನೆ ಹಾಗೂ ಸಂತೋಷವಾಗುತ್ತಿದೆ. ಹಿಂದೆ ಹೆಣ್ಣು ಮಕ್ಕಳಿಗೆ ಮತದಾನ ಮಾಡುವ ಹಕ್ಕು ಇರಲಿಲ್ಲ. ಕೇವಲ ಶ್ರೀಮಂತರು, ಪದವಿಧರರಿಗೆ ಮಾತ್ರ ಇತ್ತು, ಡಾ.ಬಿ.ಆರ್.ಅಂಬೇಡ್ಕರ್ ಹೆಣ್ಣು ಮಕ್ಕಳಿಗೂ ಮತದಾನದ ಹಕ್ಕನ್ನು ಕೊಡಿಸಿದ್ದಾರೆ ಇದರಿಂದ ನಮ್ಮ ನಾಯಕರನ್ನು ನಾವೇ ಆಯ್ಕೆ ಮಾಡಿಕೊಳ್ಳಲು ಸಹಕಾರಿಯಾಗಿದೆ ಎಂದು ಅಭಿಪ್ರಾಯವನ್ನು ಹಂಚಿಕೊಂಡರು.

ಇದೇ ವೇಳೆ ಯುವ ಮತದಾರರಿಂದ ಹಸ್ತಾಕ್ಷರ ಸಂಗ್ರಹ ಹಾಗೂ ಮಾನವ ಸರಪಳಿ ನಿರ್ಮಿಸಿ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರೇಪಿಸಲಾಯಿತು. ಈ ವೇಳೆ ತಾಲ್ಲೂಕು ಯೋಜನಾಧಿಕಾರಿ ಕಿ.ರಂಗಸ್ವಾಮಿ, ಕಾಲೇಜಿನ ಪ್ರಾಂಶುಪಾಲರಾದ ಅರುಣ್, ಕಾಲೇಜು ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

ಅರ್ಥಪೂರ್ಣವಾಗಿ ಶಾಸಕ ದರ್ಶನ್ ಧ್ರುವನಾರಾಯಣ್ ಹುಟ್ಟುಹಬ್ಬ ಆಚರಣೆ

■ ಕಾಯಕಯೋಗಿ ಸುದ್ದಿ

ನಂಜನಗೂಡು: ಬಡವರಿಗೆ ಮತ್ತು ಸಂಕಷ್ಟದಲ್ಲಿ ಇರುವವರಿಗೆ ಸಹಾಯ ಮಾಡುವ ಮೂಲಕ ಹುಟ್ಟು ಹಬ್ಬಕ್ಕೆ ಕರೆ ನೀಡಿದ್ದ ಶಾಸಕ ದರ್ಶನ್ ಧ್ರುವನಾರಾಯಣ್ ಅವರ ಕರೆಗೆ ಸ್ಪಂದಿಸಿದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರು ಶಾಸಕ ದರ್ಶನ್ ಧ್ರುವನಾರಾಯಣ್ ರವರ ಹುಟ್ಟುಹಬ್ಬವನ್ನು ನಂಜನಗೂಡು ಎಸ್.ಸಿ ಬ್ಲಾಕ್ ಕಾಂಗ್ರೆಸ್ ಘಟಕದ ವತಿಯಿಂದ ತಾಲ್ಲೂಕಿನ ಸಿಂಧುವಳ್ಳಿ ಗ್ರಾಮದ ಕರುಣಾಲಯ ಅಂದ ಬುದ್ಧಿಮಾಂದ್ಯ ಹಾಗೂ ವಿಕಲಚೇತನರಿಗೆ ಉಪಹಾರ ನೀಡುವುದರ ಮೂಲಕ ಅರ್ಥಪೂರ್ಣ ವಾಗಿ ಆಚರಿಸಲಾಯಿತು.



ಈ ಸಂದರ್ಭದಲ್ಲಿ ಕಾಂಗ್ರೆಸ್ ಯುವ ಮುಖಂಡ ಕಳಲೆ ರಾಜೇಶ್ ಮಾತನಾಡಿ, ಶಾಸಕರಾದ ದರ್ಶನ್ ಧ್ರುವ ನಾರಾಯಣ್ ರವರು ನನ್ನ ಹುಟ್ಟುಹಬ್ಬಕ್ಕೆ ಯಾರೂ ಕೂಡ ಫ್ಲೆಕ್ಸ್, ಬ್ಯಾನರ್ ಗಳನ್ನು ಹಾಕಬಾರದು ಮತ್ತು ಕೇಕ್, ಹೋಗುಚ್ಚ, ಶಾಲು ಹಾರ ತುರಾಯಿಗಳನ್ನು ತರಬಾರದು ಅದರ ಬದಲು ಸಂಕಷ್ಟದಲ್ಲಿರುವ ಬಡವರಿಗೆ ಸಹಾಯ ಮಾಡುವ ಮೂಲಕ ಆಚರಣೆ ಮಾಡುವಂತೆ ಕರೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ನಮ್ಮ ಎಲ್ಲಾ ಕಾರ್ಯಕರ್ತರು ಆಸ್ಪತ್ರೆ, ವೃದ್ಧಾಶ್ರಮ ಸೇರಿದಂತೆ ಹಾಡಿಗಳಲ್ಲಿ ವಾಸಿಸುವ ಬಡ ಜನರಿಗೆ ಬೆಡ್ ಶೀಟ್ ವಿತರಣೆ, ಆಹಾರ ಪದಾರ್ಥಗಳ ವಿತರಣೆ ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅರ್ಥಪೂರ್ಣವಾಗಿ ಹುಟ್ಟು ಹಬ್ಬವನ್ನು ಆಚರಣೆ ಮಾಡಿದ್ದೇವೆ ಎಂದು ಹೇಳಿದ್ದಾರೆ.

ಈ ಸಂದರ್ಭದಲ್ಲಿ ಕರುಣಾಲಯ ಆಸ್ಪತ್ರೆಯ ಚಾರಿಟೇಬಲ್ ಟ್ರಸ್ಟ್ ನ ಮೆಬರ್, ಬ್ಲಾಕ್ ಕಾಂಗ್ರೆಸ್ ಎಸ್.ಸಿ ಘಟಕದ ಅಧ್ಯಕ್ಷ ಉಪ್ಪನಹಳ್ಳಿ ಶಿವಣ್ಣ, ಕಳಲೆ ರಾಜೇಶ್, ಬದನವಾಳು ಸೋಮು, ಜಿ.ಮರಳ್ಳಿ ಜಗದೀಶ್, ಸಿ. ಆರ್. ಮಹದೇವ್, ದೇವರಸನಹಳ್ಳಿ ರಘು, ಮುಳ್ಳೂರು ಮಹೇಂದ್ರ ಸೇರಿದಂತೆ ಹಲವರು ಭಾಗವಹಿಸಿದ್ದರು.

ಏ.2ರಂದು ಚುಂಚನಹಳ್ಳಿ ಶ್ರೀ ಮಹದೇಶ್ವರಸ್ವಾಮಿ ಜಾತ್ರಾ ಮಹೋತ್ಸವ

ರಥೋತ್ಸವಕ್ಕೆ ಸಕಲ ಸಿದ್ಧತೆ

■ ಕಾಯಕಯೋಗಿ ಸುದ್ದಿ
ಸಿ.ಎಂ ಸುಗಂಧರಾಜು

ನಂಜನಗೂಡು: ಏ.2ರಂದು ನಂಜನಗೂಡು ತಾಲ್ಲೂಕಿನ ಚುಂಚನಹಳ್ಳಿ ಗ್ರಾಮದಲ್ಲಿ ಶ್ರೀ ಮಹದೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವ ನಡೆಯಲಿದ್ದು, ಜಾತ್ರಾ ಮಹೋತ್ಸವಕ್ಕೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ.

ಶುಕ್ರವಾರ ಶ್ರೀ ಮಹದೇಶ್ವರ ಸ್ವಾಮಿ ದೇವಾಲಯದಲ್ಲಿ ಪೂಜೆಯನ್ನು ಸಲ್ಲಿಸಿ ರಥೋತ್ಸವವನ್ನು ಕಟ್ಟುವ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಸುಮಾರು 50 ಅಡಿ ಎತ್ತರದ ರಥೋತ್ಸವಕ್ಕೆ ಬಣ್ಣ ಬಣ್ಣದ ಬಟ್ಟೆ, ವಿವಿಧ ಬಗೆಯ ಹೂವುಗಳಿಂದ ಶೃಂಗಾರ ಮಾಡಲಾಗುತ್ತದೆ.





ಏ.1 ರಂದು ಸೋಮವಾರ ಸಂಜೆ 5 ಗಂಟೆಗೆ ರಥೋತ್ಸವಕ್ಕೆ ಪೂಜೆಯನ್ನು ಸಲ್ಲಿಸಿ ರಥಕ್ಕೆ ಕಳಸವನ್ನು ಪ್ರತಿಷ್ಠಾಪನೆ ಮಾಡಲಾಗುತ್ತದೆ. ಸೋಮವಾರ ರಾತ್ರಿ ಶ್ರೀ ಕಡಕಲಕಟ್ಟೆ ಮಠದಿಂದ ಮಹದೇಶ್ವರ ಸ್ವಾಮಿಯ ಮೂರ್ತಿಯನ್ನು ರುದ್ರಾಕ್ಷಿ ಮಂಟಪದಲ್ಲಿ ಕುಳ್ಳಿರಿಸಿ, ಗ್ರಾಮದ ಪ್ರಮುಖ ಬೀದಿಗಳಲ್ಲಿ ಮಂಗಳವಾದ್ಯದೊಂದಿಗೆ ಅದ್ದೂರಿಯಾಗಿ ಮೆರವಣಿಗೆ ಮಾಡಿ, ನಂತರ ಚುಂಚನಹಳ್ಳಿ ಗ್ರಾಮದ ಹೊರವಲಯದಲ್ಲಿರುವ ಶ್ರೀ ಮಹದೇಶ್ವರ ಸ್ವಾಮಿ ದೇವಾಲಯಕ್ಕೆ ದೇವರನ್ನು ತಂದು ಪ್ರತಿಷ್ಠಾಪನೆ ಮಾಡಿ ವಿವಿಧ ಧಾರ್ಮಿಕ ವಿಧಿ ವಿಧಾನಗಳನ್ನು ನಡೆಸಲಾಗುತ್ತದೆ. ಏ.2 ರಂದು ಮಂಗಳವಾರ ಮುಂಜಾನೆ ಶ್ರೀ ಮಹದೇಶ್ವರ ಸ್ವಾಮಿಗೆ ರುದ್ರಾಭಿಷೇಕ, ಕ್ಷೀರಾಭಿಷೇಕ, ಫಲ ಪಂಚಾಮೃತ ಅಭಿಷೇಕ ಸೇರಿದಂತೆ ಹೋಮ–ಹವನ ಮಾಡಿ ವಿವಿಧ ಧಾರ್ಮಿಕ ವಿಧಿ ವಿಧಾನಗಳನ್ನು ನಡೆಸಲಾಗುತ್ತದೆ. ಬೆಳಿಗ್ಗೆ 11 ಗಂಟೆಗೆ ಶ್ರೀ ಮಹದೇಶ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ-4
30-03-2024
ತುಮಕೂರು-ಚಾಮರಾಜನಗರ

ತಾಳವಾಡಿಯಲ್ಲಿ ಮಾರಮ್ಮನ ಜಾತ್ರೆ ಮಸೀದಿ ಮುಂದೆ ಕೊಂಡ ಹಾಯ್ದು ಭಾವೈಕ್ಯತೆ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಅಪ್ಪಟ ಕನ್ನಡಿಗರೇ ಇರುವ ತಮಿಳುನಾಡಿನ ತಾಳವಾಡಿಯಲ್ಲಿ ಹಿಂದೂ-ಮುಸ್ಲಿಂ ಭಾವೈಕ್ಯತೆ ಸಾರುವ ಮಾರಮ್ಮನ ಕೊಂಡೋತ್ಸವ ವಿಜೃಂಭಣೆಯಿಂದ ನಡೆದಿದೆ. ಚಾಮರಾಜನಗರ ಜಿಲ್ಲೆಯ ಗಡಿಭಾಗಕ್ಕೆ ಹೊಂದಿಕೊಂಡಿರುವ ತಮಿಳುನಾಡಿನ ತಾಳವಾಡಿಯಲ್ಲಿ ಮಾರಮ್ಮನ ಜಾತ್ರೆ ಪ್ರಯುಕ್ತ ಮಸೀದಿ ಮುಂಭಾಗದಲ್ಲೇ ಕೊಂಡೋತ್ಸವ ನಡೆಯಿತು. ಈ ಮೂಲಕ ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ತಾಳವಾಡಿ ಸಾಕ್ಷಿಯಾಯಿತು. ಸುಮಾರು 150 ವರ್ಷಗಳಿಂದ ಈ ಕೊಂಡೋತ್ಸವ ನಡೆಯುತ್ತಾ ಬಂದಿದ್ದು, ತಾಳವಾಡಿ ಫಿರ್ಕಾದ 58 ಗ್ರಾಮಗಳು ಸೇರಿದಂತೆ ಚಿಕ್ಕಮರಾಜನಗರ, ತಮಿಳುನಾಡಿನ ಈರೋಡ್, ಕೊಯಮತ್ತೂರು ಸೇರಿದಂತೆ ವಿವಿಧೆಡೆಯಿಂದ ಸಾವಿರಾರು ಭಕ್ತರು ಧಾರ್ಮಿಕ ಉತ್ಸವದಲ್ಲಿ ಪಾಲ್ಗೊಂಡಿದ್ದರು. ಗ್ರಾಮದ ಮುಖ್ಯ ಬೀದಿಯಲ್ಲಿರುವ ಮಾರಮ್ಮನ ದೇಗುಲದ ಪಕ್ಕ ಮಸೀದಿ ಇದೆ. ಇದರ ಗೋಡೆಗೆ ಅಂಟಿಕೊಂಡಂತೆ ಟ್ರಸ್ಟಿನವರ್ತ್ ಕಾಲದಲ್ಲಿ ನಿರ್ಮಾಣವಾಗಿರುವ ಮೇಚಗೋಪಾಲ ಸ್ವಾಮಿ ಗುಡಿ ಇದೆ. ಮಸೀದಿ ಮುಂಭಾಗದಲ್ಲೇ ಕೊಂಡೋತ್ಸವ ಜರುಗುವುದು ಈ ಜಾತ್ರೆಯ ವಿಶೇಷ. 4 ದಶಕದ ಹಿಂದೆ ಜಾತ್ರೆ ಸಂಬಂಧ ಫರ್ಮಾನ್‌ಯೊಂದಿಗೆ ನಂತರ ಊರಿನ ಎಲ್ಲಾ ಕೋಮಿನ ಮುಖಂಡರು ಕುಳಿತು ಚರ್ಚಿಸಿ ಯಾವುದೇ ಗಲಾಟೆಗೆ ಅವಕಾಶ ನೀಡದಂತೆ ಸಮಾಜದಲ್ಲಿ



ಸಾಮರಸ್ಯ ಕಾಪಾಡುವುದರೊಂದಿಗೆ ಜಾತ್ರಾ ಮಹೋತ್ಸವ ಆಚರಣೆಗೆ ಮುಂದಾಗಿದ್ದರು. ಅದರಿನಿದಲೂ ಸಾಮರಸ್ಯದಿಂದ ಮಸೀದಿ ಮುಂಭಾಗ ಕೊಂಡೋತ್ಸವ ನಡೆದುಕೊಂಡು ಬಂದಿದ್ದು ದೇವಾಲಯ ಅರ್ಚಕ ಶಿವಣ್ಣ ಗುರುವಾರದಂದು ಕೊಂಡ ಹಾಯ್ದರು.

ಮಹದೇವಪ್ರಸಾದ್ ಬದುಕು ಹೋರಾಟ ನೆನೆದ ಡಾ.ಹೆಚ್.ಸಿ.ಮಹದೇವಪ್ಪ

■ ಕಾಯಕಯೋಗಿ ಸುದ್ದಿ

ಗುಂಡ್ಲುಪೇಟೆ: ಚಾಮರಾಜನಗರ ಅಭಿವೃದ್ಧಿ ವಿಚಾರದಲ್ಲಿ ಮಹದೇವ ಪ್ರಸಾದ್ ಅವರಂತಹ ನಾಯಕರು ಮತ್ತೊಬ್ಬರು ಇಲ್ಲ ಈ ಸಭೆಯನ್ನು ಮಹದೇವ ಪ್ರಸಾದ್ ಅವರು ಜೊತೆಗೂಡಿ ಈ ಸಭೆ ಮಾಡುತ್ತಿದ್ದೇವೆ ಎಂದು ಕಾಣುತ್ತಿದೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಹೇಳಿದರು.

ಚಾಮರಾಜನಗರ ಗುಂಡ್ಲುಪೇಟೆ ತಾಲ್ಲೂಕು ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರ ಸಭೆ ಪಟ್ಟಣದ ಬಸವ ಭವನದಲ್ಲಿ ನಡೆದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಮಹದೇವ ಪ್ರಸಾದ್ ಅವರು ಕೆರೆಗಳನ್ನು ತುಂಬಿಸುವ ಯೋಜನೆಯನ್ನು ತಾಲ್ಲೂಕಿನಲ್ಲಿ ಜಾಲಗೆರೆ ತಂದರು ಇಂದು ಅದರ ಪ್ರತಿಫಲ ಕಾಣುತ್ತಿದೆ ಮಹದೇವ ಪ್ರಸಾದ್ ಅವರಿಗೆ ದೂರ ದೃಷ್ಟಿಯ ಆಲೋಚನೆ ಬಹಳವಾಗಿ ಚಿನ್ನಾಗಿತ್ತು ಎಂದು ಮಹದೇವ ಪ್ರಸಾದ್ ಅವರ ಆಡಳಿತದ ಅವಧಿಯಲ್ಲಿ ಕಂಡ ಅಭಿವೃದ್ಧಿ



ಕಾರ್ಯಗಳನ್ನು ಜನತೆಗೆ ತಿಳಿಸಿದರು.

ಬಿಜೆಪಿ ಸುಡುವ ಮನೆ ಮೈಸೂರು ಕೊಡಗು ಶಿವಮೊಗ್ಗ ಬೆಳಗಾವಿ ಚಿಕ್ಕಮಗಳೂರು ತುಮಕೂರು ಕೊವಿಡ್ ಈರೀತಿ ಯಲ್ಲಿ ಒಂದಲ್ಲ ಒಂದು ಕ್ಷೇತ್ರದಲ್ಲಿ ಕತ್ತಿಕೊಂಡು ಉರಿಯುತ್ತಿದೆ ಸುಳ್ಳು ಹೇಳಿ ಅಧಿಕಾರಕ್ಕೆ ಬಂದ ಬಿಜೆಪಿ ರೈತರು ಬಡವರು ಮಹಿಳೆಯರು ಮಕ್ಕಳು ಮತ್ತು ಶೈಕ್ಷಣಿಕ ಸಾಮಾಜಿಕ ಸಾಮಾಜಿಕ ಕ್ಷೇತ್ರಗಳ ಬಗ್ಗೆ ಯಾವುದೇ ಯೋಚನೆ ಇಲ್ಲ ಭಾರತ ದೇಶ 126ನೇ ಸ್ಥಾನದಲ್ಲಿ ಇದೆ ಬಿಜೆಪಿ ಪಕ್ಷ ಧಾರ್ಮಿಕ ಭಾವನಾತ್ಮಕ ವಿಚಾರಗಳನ್ನು ಮುಂದೆ ಇಟ್ಟು ಕೊಂಡು ಬಿಜೆಪಿ ಪಕ್ಷ ಬರುತ್ತಿದೆ ಮತ ಕೇಳಲು ಜನತೆ ಇದರ ಬಗ್ಗೆ ಎಚ್ಚೆತ್ತು ಕೊಂಡು ಉತ್ತಮ ಭವಿಷ್ಯ ರೂಪಿಸುವ ಕಾಂಗ್ರೆಸ್ ಪಕ್ಷದ ಆಡಳಿತವನ್ನು ನೋಡಿ ಎಂದು ಹೇಳಿದರು.

ಜನಪರವಾದ ಆಡಳಿತ ಬರಬೇಕು ಎಂದರೆ ಕೋಮುವಾದ ತೊಲಗಬೇಕು ನಾವು ಹಲವಾರು ಸವಾಲುಗಳನ್ನು ಮುಂದೆ ಇಟ್ಟುಕೊಂಡು ಈ ಚುನಾವಣೆ ಎದುರಿಸಲು ಹೋಗುತ್ತಿದ್ದೇವೆ ಸಂವಿಧಾನ ಪ್ರಜಾಪ್ರಭುತ್ವ ಮೂಲಭೂತ ಹಕ್ಕುಗಳು ವಾಕ್ ಸ್ವಾತಂತ್ರ್ಯ ಉಳಿಯಬೇಕಾದರೆ ಬಿಜೆಪಿ ಪಕ್ಷವನ್ನು ಸೋಲಿಸಬೇಕು ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ತಂದಿರುವ ಜನಪರವಾದ ಯೋಜನೆಗಳನ್ನು ಮನದಲ್ಲಿ ಇಟ್ಟುಕೊಂಡು ಜನತೆ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಬಹುಮತವನ್ನು ನೀಡುವ ಮೂಲಕ ಅಧಿಕಾರ ಹಿಡುವ ನಿಟ್ಟಿನಲ್ಲಿ ಆಶೀರ್ವಾದ ಮಾಡಬೇಕು ಎಂದು ಜನತೆಯನ್ನು ಕೇಳಿ ಕೊಂಡರು.

ನಂತರ ಶಾಸಕರು ಹೆಚ್.ಎಂ.ಗಣೇಶ್ ಪ್ರಸಾದ್ ಮಾತನಾಡಿ ನನಗೆ ಒಂದು ಓಟು ಕಡಿಮೆ ಆದರೂ ಪರವಾಗಿಲ್ಲ ಸುನಿಲ್ ಬೋಸ್ ಅವರಿಗೆ ಕ್ಷೇತ್ರದ ಜನತೆ ಹೆಚ್ಚಿನ ಮತಗಳನ್ನು ನೀಡಬೇಕು. ಕ್ಷೇತ್ರದಲ್ಲಿ ವಿರೋಧ ಪಕ್ಷದ ನಾಯಕರು ಅನಾವಶ್ಯಕವಾಗಿ ಟೀಕೆ ಮಾಡುತ್ತಿದ್ದಾರೆ ಬಿಜೆಪಿ ಶಾಸಕರ ಅವಧಿಯಲ್ಲಿ ತಾಲ್ಲೂಕು ಅಭಿವೃದ್ಧಿ ಮಾಡುವ ಹಿತದೃಷ್ಟಿ ಇರಲಿಲ್ಲ ಈಗಾಗ ನಮ್ಮ ಸರ್ಕಾರ ಮಾಡುತ್ತಿರುವ ಅಭಿವೃದ್ಧಿ ಕೆಲಸಗಳನ್ನು ಸಹಿಸದೆ ಮಾತನಾಡುತ್ತಿದ್ದಾರೆ ನಾವು ಅಧಿಕಾರದಲ್ಲಿ ಇಲ್ಲದ ದಿನಗಳಲ್ಲಿ ಕೂಡ ನಮ್ಮ ಕ್ಷೇತ್ರದಲ್ಲಿ ಸಾಕಷ್ಟು ಸಹಾಯ ಗಳನ್ನು ಮಾಡಿದ್ದೇವೆ ವಿರೋಧ ಪಕ್ಷದ ನಾಯಕರಿಗೆ ನಮ್ಮ ಗುಂಡ್ಲುಪೇಟೆ ಕ್ಷೇತ್ರದಲ್ಲಿ ಎಷ್ಟು ಬೂತ್ ಗಳು ಇವೆ ಎಂಬುದೇ ಗೊತ್ತಿಲ್ಲ ಬೂತ್ ಗಳು ಎಷ್ಟು ಇವೆ ಎಂಬುದನ್ನು ತಿಳಿದು ಕೊಂಡು ಪ್ರಚಾರ ಮಾಡಲಿ ಎಂದು ಟಾಂಗ್ ನೀಡಿದರು. ಸುನಿಲ್ ಬೋಸ್ ಅವರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಾಗಿ ಹತ್ತು ಹಲವು ಅಭಿವೃದ್ಧಿ ವಿಚಾರದಲ್ಲಿ ಕೆಲಸ ಮಾಡಿದ್ದಾರೆ ಸಂಸದರಾಗಿ ಸುನಿಲ್ ಬೋಸ್ ಅವರನ್ನು ಆಯ್ಕೆ ಮಾಡುವ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಗೆಲುವು ತಂದುಕೊಡಲು ಒಗ್ಗಟ್ಟಾಗಿ ಶ್ರಮಿಸುವ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕ ಎ.ಆರ್.ಕೃಷ್ಣ ಮೂರ್ತಿ, ವಿಧಾನಸಭಾ ಸದಸ್ಯ ಡಾ.ತಿಮ್ಮಯ್ಯ, ಮಾಜಿ ಶಾಸಕ ಯತೀಂದ್ರ ಸಿದ್ದರಾಮಯ್ಯ, ಮಾಜಿ ಸಂಸದ ಶಿವಣ್ಣ,ಮಾಜಿ ಸಂಸದ ಎ.ಸಿದ್ದರಾಜು, ಚಾಮುಲ್ ನಿರ್ದೇಶಕ ಹೆಚ್.ಎಸ್. ನಂಜುಂಡಪ್ರಸಾದ್, ಕಾಡಾ ಮಾಜಿ ಅಧ್ಯಕ್ಷ ಹಂಗಳ ನಂಜಪ್ಪ, ಹಿರಿಯ ಮುಖಂಡ ಮುನಿರಾಜು, ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಮರಿಸ್ವಾಮಿ, ಜಿ.ಪಂ.ಮಾಜಿ ಉಪಾಧ್ಯಕ್ಷ ಕಬ್ಬಹಳ್ಳಿ ಮಹೇಶ್, ಜಿ.ಪಂ.ಮಾಜಿ ಸದಸ್ಯ ಕೆರಹಳ್ಳಿ ನವೀನ್, ಮತ್ತಿತರರು ಉಪಸ್ಥಿತರಿದ್ದರು.

> ಎಂಟು ಜನ ಆಕಾಂಕ್ಷಿ ಇದ್ದರು ಸಹ ನನಗೆ ಸ್ಪರ್ಧೆ ಮಾಡಲು ಕಾಂಗ್ರೆಸ್ ಪಕ್ಷ ಅವಕಾಶ ಮಾಡಿಕೊಟ್ಟಿದೆ. ಗುಂಡ್ಲುಪೇಟೆ ಅಂತಲ್ಲ ಚಾಮರಾಜನಗರ ಜಿಲ್ಲೆ ಹಲವಾರು ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಂಡಿದೆ ಅದು ಮಹದೇವಪ್ರಸಾದ್ ಅವರಿಂದ ಕಳೆದ ಬಾರಿ ಲೋಕಸಭಾ ಚುನಾವಣೆಯಲ್ಲಿ ಚಾಮರಾಜನಗರ ಕ್ಷೇತ್ರ ಸೋಲು ಕಂಡಿತು ಕಾಂಗ್ರೆಸ್ ಪಕ್ಷ ಮತ್ತೆ ಈ ಕ್ಷೇತ್ರವನ್ನು ಗೆಲುವು ಕಾಣಲು ನನಗೆ ಹೆಚ್ಚಿನ ಮತಗಳನ್ನು ನೀಡಿಸುವ ನಿಟ್ಟಿನಲ್ಲಿ ಕಾರ್ಯಕರ್ತರು ಹಾಗೂ ಅಭ್ಯರ್ಥಿಗಳೆಂದು ತಿಳಿದು ನನ್ನ ಗೆಲುವಿಗೆ ಶ್ರಮಿಸಬೇಕು ಎಂದು ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರ ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ಮನವಿ ಮಾಡಿಕೊಂಡರು.

ನಿವೃತ್ತ ಎಸಿಪಿ ಲೋಕೇಶ್ವರ್ ಮನೆಗೆ ಮುದ್ದಹನುಮೇಗೌಡ ಭೇಟಿ



■ ಕಾಯಕಯೋಗಿ ಸುದ್ದಿ

ತಿಪಟೂರು ಕಾಂಗ್ರೆಸ್ ಮುಖಂಡ ಸಮಾಜ ಸೇವಕ ನಿವೃತ್ತ ಎಸಿಪಿ ಲೋಕೇಶ್ವರ್ ಅವರ ಮನೆಗೆ ಇಂದು ತುಮಕೂರು ಕಾಂಗ್ರೆಸ್ ಲೋಕಸಭಾ ಅಭ್ಯರ್ಥಿ ಮುದ್ದಾಹನುಮೇಗೌಡ ಭೇಟಿ ನೀಡಿ ಲಘು ಉಪಾಹಾರ ಸೇವಿಸಿ ಲೋಕೇಶ್ವರ್ ಮತ್ತು ಲೋಕೇಶ್ವರ್ ಬೆಂಬಲಿಗರಿಗೆ ನಾನು ಮುಂದಿನ ದಿನಗಳಲ್ಲಿ ಎಲ್ಲಾ ವೈ ಮನಸುಗಳನ್ನು ಸರಿಪಡಿಸಿ ಲೋಕೇಶ್ವರ್ ಬೆಂಬಲರಿಗೆ ಉತ್ತಮ ಸ್ಥಾನಮಾನ ದೊರಕಿಸಿ ಕೊಡುವಲ್ಲಿ ನಾನು ಸಂಪೂರ್ಣ ಪ್ರಯತ್ನ ಮಾಡುತ್ತೇನೆ. ನೀವು ನನ್ನ ಜೊತೆ ಕೈ ಜೋಡಿಸಿ ಈ ಬಾರಿ ಗೆಲ್ಲಿಸಿದರೆ ನಾನು ಲೋಕೇಶ್ವರ್ ಮತ್ತು ಅವರ ಹಿಂಬಾಲಕರು ಮತ್ತು ಬೆಂಬಲಕರಿಗೆ ಕಾರ್ಯಕರ್ತರಿಗೆ ಏನು ಸ್ಥಾನಮಾನಗಳು ಮತ್ತು ಕಾರ್ಯ ಚಟುವಟಿಕೆಗಳು ಬರಬೇಕು ಎಂಬುದನ್ನು ನಾನು ಉತ್ತಮ ರೀತಿಯಲ್ಲಿ ಅವರಿಗೆ ಒದಗಿಸಿಕೊಡುವಲ್ಲಿ ಯಶಸ್ವಿ ಆಗುತ್ತೇನೆ ಎಂದು ನಿಮ್ಮಗಳಿಗೆ ಭರವಸೆ ನೀಡುತ್ತಿದ್ದೇನೆ ಲೋಕೇಶ್ವರ್ ನನಗೆ ಇಂದಿನಿಂದ ಅಲ್ಲ ಪೊಲೀಸ್ ಇಲಾಖೆಯಿಂದ ನನಗೆ ತುಂಬಾ ಆತ್ಮೀಯರು ನನಗೆ ಎಲ್ಲ ತಿಳಿದಿದೆ ಎಂದು ಹೇಳಿದರು

ಬಿಜೆಪಿ ಮತ್ತೆ ಅಧಿಕಾರಕ್ಕೆ ಬಾರದಂತೆ ನೋಡಿಕೊಳ್ಳಿ: ಮತದಾರರಲ್ಲಿ ಸಚಿವರ ಮನವಿ

■ ಕಾಯಕಯೋಗಿ ಸುದ್ದಿ

ಕೊಳ್ಳೇಗಾಲ: ಪಟ್ಟಣದ ನ್ಯಾಷನಲ್ ಸ್ಕೂಲ್ ಮೈದಾನದಲ್ಲಿ ಡಾ.ನಗರ ಲೋಕಸಭಾ ಕ್ಷೇತ್ರದ ಕಾರ್ಯಕರ್ತರ ಚುನಾವಣಾ ಪೂರ್ವ ಸಭೆಯನ್ನು ನಡೆಸಲಾಯಿತು.

ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಮಾತನಾಡಿ, ಈಗ ಬಂದಿರುವ ಚುನಾವಣೆ ಬಹಳ ಮುಖ್ಯವಾದದ್ದು. ಬಿಜೆಪಿ ಸರ್ಕಾರ ಧರ್ಮ ಹಾಗೂ ದೇವರ ಹೆಸರಿನಲ್ಲಿ ರಾಜಕಾರಣ ಮಾಡುತ್ತಿದ್ದು, ಕುದ್ರ ತಲೆಗೆ ದೇವರ ಹೆಸರಿನಲ್ಲಿ ಭಯ ಹುಟ್ಟಿಸಿ ರಾಷ್ಟ್ರೀಯ ಸಮಸ್ಯೆಗಳ ಬಗ್ಗೆ ತಲೆಕೆಡಿಸಿಕೊಳ್ಳದೇ 1947 ರಲ್ಲಿ ಜನಸಂಘ ಬಾಬಾ ಸಾಹೇಬ್ ಅಂಬೇಡ್ಕರ್ ಸಂವಿಧಾನ ವಿರೋಧಿಸಿ ಜಾರಿಗೆ ತರಲು ಒಪ್ಪಿಗೆ ಸೂಚಿಸಿದ ಅಂದಿನ ಪರಿಸ್ಥಿತಿ ಇಂದು ಬಿಜೆಪಿಯವರು ಸಂವಿಧಾನವನ್ನು ಬದಲಾಯಿಸಲು ಎಲ್ಲಾ ರೀತಿಯ ಹುನ್ನಾರ ಗಳನ್ನು ನಡೆಸುತ್ತಿದ್ದಾರೆ. ಆದ್ಯದರಿಂದ ರಾಷ್ಟ್ರೀಯ ಜನತೆ ಎಚ್ಚೆತ್ತುಕೊಂಡು ಬಿಜೆಪಿ ಮತ್ತೆ ಅಧಿಕಾರಕ್ಕೆ ಬಾರದಂತೆ ನೋಡಿಕೊಳ್ಳ ಬೇಕೆಂದು ಮತದಾರರಲ್ಲಿ ಮನವಿ ಮಾಡಿದರು.

ಬಿಜೆಪಿ ಮತ್ತೆ ಗೆಲಾಮಿಗಿರಿಗೆ ತಳ್ಳಲು ಅವಕಾಶ ಕಲ್ಪಿಸಿದ್ದಾರೆ. ಈ ಕಾರಣಕ್ಕಾಗಿ ಇಂದಿನ ಪ್ರಜ್ಞಾವಂತ ಯುವಕರು ಕಾಂಗ್ರೆಸ್ ಸರ್ಕಾರದ



ಐದು ಗ್ಯಾರಂಟಿಗಳನ್ನು ಮನೆಮನೆಗೆ ತಿಳಿಸಿ ಸಿದ್ದರಾಮಯ್ಯರವರ ಆಡಳಿತವನ್ನು ಜನರಲ್ಲಿ ಮನವರಿಕೆ ಮಾಡಿ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಲು ಶ್ರಮಿಸಬೇಕು ಎಂದು ತಿಳಿಸಿದರು.

ಈ ಸಭೆಯಲ್ಲಿ ಕ್ಷೇತ್ರದ ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ, ಕಳೆದ ವಿಧಾನಸಭಾ ಚುನಾವಣೆಯಲ್ಲಿ ನನಗೆ 59 ಸಾವಿರಕ್ಕೂ ಹೆಚ್ಚು ಮತ ನೀಡಿ ಗೆಲ್ಲಿಸಿ ಕಾಂಗ್ರೆಸ್ ಪಕ್ಷಜಯಭೇರಿಯಾಗಲು ಕಾರಣಕರ್ತರಾದಂತೆ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ರವರಿಗೆ ನನ್ನಿಗಿಂತಲೂ ಹೆಚ್ಚು ಮತ ನೀಡಿ ಗೆಲ್ಲಿಸಬೇಕೆಂದು ಮತದಾರರಲ್ಲಿ ಮನವಿ ಮಾಡಿದರು.

ಯತೀಂದ್ರ ಸಿದ್ದರಾಮಯ್ಯ ಮಾತನಾಡಿ, ನರೇಂದ್ರಮೋದಿಯವರು ಕಳೆದ ಲೋಕಸಭಾ ಚುನಾವಣೆಯಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗ ಸೃಷ್ಟಿ ಮಾಡುವುದಾಗಿ ಮತ್ತು ವಿದೇಶದಲ್ಲಿರುವ ಕಪ್ಪು ಹಣವನ್ನು ತಂದು ಪ್ರತಿ ಕುಟುಂಬಕ್ಕೆ 15 ಲಕ್ಷ ರೂ. ಅವರ ಬ್ಯಾಂಕ್ ಖಾತೆಗಳಿಗೆ ಹಾಕುವುದಾಗಿ ಚುನಾವಣಾ ಪೂರ್ವದಲ್ಲಿ ಆಶ್ವಾಸನೆ ನೀಡಿ ಯಾವುದೇ ಆಶ್ವಾಸನೆ ಈಡೇರಲಿಲ್ಲ ಕೇಂದ್ರದ ಬಿಜೆಪಿ ಸರ್ಕಾರ ಆರ್.ಎಸ್.ಎಸ್ ಈಡಿತದಲ್ಲಿದ್ದು, ಸಂವಿಧಾನ ಬದಲಾವಣೆ ಮಾಡಲು ಅವರಿಗೆ ಬಹುಮತ ಬೇಕಾಗಿರುವುದ್ದರಿಂದ 400ಸ್ಥಾನ ಗೆಲ್ಲಬೇಕೆಂಬ ತಂತ್ರಗಾರಿಕೆಯನ್ನು ಮಾಡುತ್ತಿದ್ದಾರೆ.

ಡಾ.ಅಂಬೇಡ್ಕರ್ ನೀಡಿರುವ ಸಂವಿಧಾನ ಬದಲಾದರೆ ದೇಶ ಸಂಕಷ್ಟಕ್ಕೆ ಈಡಾಗಬೇಕಾಗುತ್ತದೆ. ಆದ್ದರಿಂದ ಮತದಾರರು ಎಚ್ಚರಿಕೆ ಮತದಾನ ಮಾಡಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದರು.

ಉಸ್ತುವಾರಿ ಸಚಿವ ವೆಂಕಟೇಶ್ ಮಾತನಾಡಿ, ನಮ್ಮ ಅಭ್ಯರ್ಥಿ ಸುನೀಲ್ ಬೋಸ್ ರವರು ಯುವಕರಿದ್ದು ರಾಜಕೀಯದಲ್ಲಿ ಅನುಭವದ್ದು ದೃವನಾರಾಯಣರಂತೆ ಜನರ ಸೇವೆಗೆ ಉತ್ಸುಕತೆಯಾಗಿರುವುದರಿಂದ ಇವರಿಗೆ ಹೆಚ್ಚು ಮತದಿಂದ ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಈ ಸಭೆಯಲ್ಲಿ ಗುಂಡ್ಲುಪೇಟೆ ಶಾಸಕ ಗಣೇಶ್ ಪ್ರಸಾದ್, ಎಂಎಲ್ಸಿ ಡಾ.ತಿಮ್ಮಯ್ಯ, ಮಾಜಿ ಶಾಸಕರು ಯತೀಂದ್ರ ಸಿದ್ದರಾಮಯ್ಯ, ಎಸ್ ಜಯಣ್ಣ ಆರ್.ನರೇಂದ್ರ, ಜಿ.ಎನ್. ನಂಜುಂಡಸ್ವಾಮಿ, ಲೋಕಸಭಾ ಅಭ್ಯರ್ಥಿ ಸುನೀಲ್ ಬೋಸ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮರಿಸ್ವಾಮಿ, ಬ್ಲಾಕ್ ಅಧ್ಯಕ್ಷರು ತೋಟೇಶ್, ಚಂದ್ರು, ಕಾರ್ಯದರ್ಶಿ ಬಸ್ತೀಪುರ ರವಿ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

ಪ್ರತಿಯೊಬ್ಬರು ಕಡ್ಡಾಯ -ನೈತಿಕ ಮತದಾನ ಮಾಡಿ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ಕಡ್ಡಾಯವಾಗಿ ಮತದಾನ ಮಾಡಿ ಎಂದು ಗುಂಡ್ಲುಪೇಟೆ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಲಿಂಗಯ್ಯ ತಿಳಿಸಿದರು.

ಗುಂಡ್ಲುಪೇಟೆ ತಾಲೂಕಿನ ತೆರಕಣಾಂಬಿ ಗ್ರಾಮ ಪಂಚಾಯಿತಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಸ್ವೀಪ್ ಸಮಿತಿಯಿಂದ ಆಯೋಜಿಸಲಾಗಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ದೇಶವನ್ನು ಮುನ್ನಡೆಸಲು ನಿಮ್ಮ ಒಂದು ಮತ ಬಹಳ ಅಮೂಲ್ಯವಾದದ್ದು. ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸಿ ಮೂಲಸೌಕರ್ಯ ಒದಗಿಸುವ ಅರ್ಹ ವ್ಯಕ್ತಿಯನ್ನು ಆಯ್ಕೆ ಮಾಡ ಬೇಕು. ಯಾವುದೇ ಆಮಿಷಗಳಿಗೆ ಒಳಗಾಗದೆ ನಿಷ್ಪಕ್ಷಪಾತವಾಗಿ ಮತಚಲಾಯಿಸಬೇಕು. ಮತದಾನ ನಿಮ್ಮ ಮುಂದಿನ ಪೀಳಿಗೆಗೆ ಭವಿಷ್ಯ ರೂಪಿಸುವಲ್ಲಿ ತನ್ಮದೇ ಆದ ಪಾತ್ರವಹಿಸುತ್ತದೆ ಎಂದು ರಾಮಲಿಂಗಯ್ಯ ತಿಳಿಸಿದರು.

ಇದೇ ವೇಳೆ ಮತದಾನ ಜಾಗೃತಿಯ ಜಿಂಗಗಳ ಮೂಲಕ ಸಾರ್ವಜನಿಕರಲ್ಲಿ ಮತ ಚಲಾವಣೆಯ ಮಹತ್ವದ ಬಗ್ಗೆ ಅರಿವು ಮೂಡಿಸಲಾಯಿತು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಹದೇವಸ್ವಾಮಿ ಗ್ರಾಮೀಣ ಸಂತೆಯಲ್ಲಿ ನೆರೆದಿದ್ದ ರೈತರಿಗೆ ಕಡ್ಡಾಯ ಮತದಾನದ ಪ್ರತಿಜ್ಞಾ ವಿಧಿ ಭೋದಿಸಿದರು.

ಸಹಾಯಕ ಯೋಜನಾಧಿಕಾರಿ ಶ್ರೀನಿವಾಸ್, ತಾಲ್ಲೂಕು ಪಂಚಾಯತಿಯ ನಿಲಕಂಠ, ಯಶೀರ್, ಶಿವಕುಮಾರ್, ಗ್ರಾಮ ಪಂಚಾಯತಿ ಕಾರ್ಯದರ್ಶಿ ರಾಜು ಎಂ, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮ ಪಂಚಾಯಿತಿ ಹಾಗೂ ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರು ಈ ಸಂಧರ್ಭದಲ್ಲಿ ಹಾಜರಿದ್ದರು.

ಸಂಘಟನೆಯಲ್ಲಿ ಮಹಿಳೆಯರ ಪಾತ್ರ ಅತ್ಯಂತ ಹಿರಿಯದ್ದು

■ ಕಾಯಕಯೋಗಿ ಸುದ್ದಿ

ತುಮಕೂರು: ನಗರದ ಎಂ.ಜಿ.ರಸ್ತೆಯಲ್ಲಿರುವ ಖಾಸಗಿ ಪಾರ್ಟಿ ಹಾಲ್‌ನಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ತುಮಕೂರು ಜಿಲ್ಲಾ ಮಹಿಳಾ ಘಟಕದ ವತಿಯಿಂದ ವಿಶ್ವ ಮಹಿಳಾ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮಕ್ಕೆ ಆಗಮಿಸಿದ್ದ ಕ.ರ.ವೇ ರಾ

website: www.kayakayogi.com

ಕಾಯಕ ಯೋಗಿ

KAYAKA YOGI - Regional Daily

ಪುಟ-5 | 30-03-2024

ಹಾಸನ-ರಾಮನಗರ

ನರೇಗಾ ಕೂಲಿ ಸ್ಥಳದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ

■ ಕಾಯಕಯೋಗಿ ಸುದ್ದಿ

ರಾಮನಗರ: ಮತದಾನಕ್ಕಿಂತ ಮತ್ತೊಂದು ದಾನ ಯಾವುದು ದೊಡ್ಡದಿಲ್ಲ. ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ಮನು ಪಿ. ಕೆ. ಅವರು ತಿಳಿಸಿದರು.

ಅವರು ಇಂದು ಚನ್ನಪಟ್ಟಣ ತಾಲ್ಲೂಕಿನ ಎಲೆತೋಟದ ಗ್ರಾಮಪಂಚಾಯತಿ ವ್ಯಾಪ್ತಿಯ ಅಳಹಳ್ಳಿ ಗ್ರಾಮದಲ್ಲಿ ಸಾರ್ವತ್ರಿಕ ಲೋಕಸಭಾ ಚುನಾವಣೆ 2024ರ ಚಿಟುವಟಿಕೆ ಭಾಗವಾಗಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಸಕ್ರಿಯವಾಗಿ ಕೆಲಸ ನಿರ್ವಹಿಸುತ್ತಿರುವ ಕೂಲಿಕಾರರಿಗೆ ಕೆಲಸದ ಸ್ಥಳದಲ್ಲಿ ಮತದಾನ ಮಹತ್ವವನ್ನು ಕುರಿತು ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮವನ್ನಕ್ಕೆ ಚಾಲನೆ ನೀಡಿ ಮಾತನಾಡಿದರು.

ಮಹಿಳೆಯರಿಂದ ರಂಗೋಲಿ ಸ್ಪರ್ಧೆ ಕಾರ್ಯಕ್ರಮ ಹಾಗೂ ಜಾಥ ಕಾರ್ಯಕ್ರಮ ಮಾಡಿಸುವುದರ ಮೂಲಕ ಜಾಗೃತಿ ಮೂಡಿಸಿದರು. ಇದೇ ಸಂದರ್ಭದಲ್ಲಿ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತಿ ಸಹಾಯಕ ನಿರ್ದೇಶಕರಾದ ಸಿದ್ದರಾಜು, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶ್ರೀಕಾಂತ್, ಸಂಜೀವಿನಿ ಒಕ್ಕೂಟದ ಸಿಬ್ಬಂದಿಗಳಾದ ಹರೀಶ್ ಬಾಬು, ಹೇಮತ್, ತಾಲ್ಲೂಕು ಐಇಸಿ ಸಂಯೋಜಕರಾದ ಭವ್ಯ, ಗ್ರಾಮ ಕಾಯಕ ಮಿತ್ರರು, ಬಿಎಫ್‌ಟಿ, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಗೂ ಕೂಲಿಕಾರ್ಮಿಕರು ಉಪಸ್ಥಿತರಿದ್ದರು.



ಪ್ಲಾಸ್ಟಿಕ್ ಶಸ್ತ್ರ ಚಿಕಿತ್ಸೆಯಿಂದ ಸಾರ್ವಜನಿಕರಿಗೆ ಅನುಕೂಲ

■ ಕಾಯಕಯೋಗಿ ಸುದ್ದಿ

ಹಾಸನ : ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಪ್ಲಾಸ್ಟಿಕ್ ಶಸ್ತ್ರಚಿಕಿತ್ಸಾ ವಿಭಾಗ ಆರಂಭಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲಾಗುವುದು ಎಂದು ಹಿಮ್ಸ್ ನಿರ್ದೇಶಕ ಡಾ.ಎಸ್.ವಿ.ಸಂತೋಷ್ ಅವರು ತಿಳಿಸಿದರು.

ನಗರದ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಶುಕ್ರವಾರ ಹಿಮ್ಸ್ ಶಸ್ತ್ರಚಿಕಿತ್ಸಾ ವಿಭಾಗ, ಚಿಕ್ಕಮಗಳೂರು ಶಸ್ತ್ರ ಚಿಕಿತ್ಸಕರ ಸಂಘ, ಕರ್ನಾಟಕ ಪ್ಲಾಸ್ಟಿಕ್ ಹಾಗು ಸುಧಾರಿತ ಶಸ್ತ್ರ ಚಿಕಿತ್ಸಕರ ಸಂಘದಿಂದ ಆಯೋಜಿಸಿದ್ದ ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಹಿಮ್ಸ್ ಆಸ್ಪತ್ರೆಯಲ್ಲಿ ಪ್ಲಾಸ್ಟಿಕ್ ಶಸ್ತ್ರಚಿಕಿತ್ಸಾ ವಿಶೇಷ ತಜ್ಞ ವಿಭಾಗವನ್ನು ಆರಂಭಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಎಲ್ಲ ಪ್ರಯತ್ನ ಮಾಡಲಾಗುವುದು. ಈ ನಿಟ್ಟಿನಲ್ಲಿ ಕೆಲಸ ಪ್ರಾರಂಭಿಸಲಾಗಿದೆ ಎಂದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಹೆಚ್.ವಿ. ಲೋಕೇಶ, ಡಾ.ಪಿ.ಆರ್.ಕೃಷ್ಣಮೂರ್ತಿ, ಡಾ.ರಾಜಣ್ಣ, ಪ್ಲಾಸ್ಟಿಕ್ ಶಸ್ತ್ರಚಿಕಿತ್ಸಾ ತಜ್ಞರ ರಾಜ್ಯ ಸಂಘದ ಅಧ್ಯಕ್ಷೆ ಡಾ.ಸ್ಮಿತಾ ಸೇಗು, ಹಿಮ್ಸ್‌ನ ಪ್ಲಾಸ್ಟಿಕ್ ಶಸ್ತ್ರಚಿಕಿತ್ಸಾ ತಜ್ಞ ಡಾ.ಪಾಲಚಂದ್ರ ಇತರರಿದ್ದರು.

ಚುನಾವಣೆಯಲ್ಲಿ ಅಕ್ರಮ ಖರ್ಚಿಗೆ ಸಂಪೂರ್ಣ ಕಡಿವಾಣ

ಕೇಂದ್ರ ವೀಕ್ಷಕರಿಂದ ಕಟ್ಟುನಿಟ್ಟಿನ ಸೂಚನೆ

■ ಕಾಯಕಯೋಗಿ ಸುದ್ದಿ

ಹಾಸನ: ಹಾಸನ ಲೋಕಸಭಾ ಕ್ಷೇತ್ರಕ್ಕೆ ನಡೆಯುವ ಚುನಾವಣೆಯಲ್ಲಿ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳು ಸಂಪೂರ್ಣ ಖರ್ಚುವೆಚ್ಚಗಳನ್ನು ನಿಯಮಾನುಸಾರವೇ ಮಾಡಬೇಕು. ಅಕ್ರಮವಾಗಿ ನಡೆಸುವ ಎಲ್ಲಾ ವೆಚ್ಚಗಳಿಗೆ ಸಂಪೂರ್ಣವಾಗಿ ಕಡಿವಾಣ ಹಾಕಲು ಎಲ್ಲ ರೀತಿಯ ಕ್ರಮ ಕೈಗೊಳ್ಳುವಂತೆ ಕೇಂದ್ರ ಚುನಾವಣಾ ಆಯೋಗದ ವೆಚ್ಚ ವೀಕ್ಷಕರಾದ ವಿಕಾಸ್ ಸಿಂಗ್ ಭಗಿ ಹಾಗೂ ವೈಭವ್ ಅಗರವಾಲ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಾಸನ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ನೋಡಲ್ ಅಧಿಕಾರಿಗಳು ಹಾಗೂ ಎಲ್ಲ ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾ ಅಧಿಕಾರಿಗಳು ಮತ್ತು ವಿವಿಧ ಚುನಾವಣಾ ತಂಡಗಳ ಮುಖ್ಯಸ್ಥರ ಸಭೆ ನಡೆಸಿ ಅವರು ಮಾತನಾಡಿದರು.

ಚುನಾವಣಾ ಸಂದರ್ಭದಲ್ಲಿ ಪ್ರತಿಯೊಂದು ವಿಚುವೆಚ್ಚಗಳೂ ಚುನಾವಣಾ ಆಯೋಗದ ನಿಯಮಾನುಸಾರವೇ ನಡೆಯಬೇಕು. ಪ್ರತಿಯೊಬ್ಬ ಅಭ್ಯರ್ಥಿಯ ಬ್ಯಾಂಕ್ ಖಾತೆಯ ಮೂಲಕವೇ ಪಾವತಿಯಾಗಬೇಕು. ಯಾವುದೇ ಕಾರಣಕ್ಕೂ ಅಕ್ರಮವಾಗಿ ಪಾವತಿ ಮತ್ತು ವೆಚ್ಚ ಮಾಡಲು ಅವಕಾಶ ನೀಡಬಾರದು. ಚುನಾವಣಾ ಆಯೋಗದ ಕೈಪಿಡಿಯನುಸಾರ ಎಲ್ಲ ತಪಾಸಣಾ ತಂಡಗಳು ಕಟ್ಟುನಿಟ್ಟಾಗಿ ಕಾರ್ಯನಿರ್ವಹಿಸುವಂತೆ ಅವರು ಸೂಚಿಸಿದರು.

ಬ್ಯಾಂಕ್ ಹಾಗೂ ಸಹಕಾರ ಸಂಘಗಳಲ್ಲಿ ಹಣಕಾಸು ವ್ಯವಹಾರಗಳ ಮೇಲೆ ನಿಗಾ ಇಡಬೇಕು. ಸಂಶಯಾಸ್ಪದ ವ್ಯವಹಾರ ಕಂಡುಬಂದಲ್ಲಿ ತಕ್ಷಣವೇ ಮಾಹಿತಿ ನೀಡಬೇಕು. ಆದಾಯ ತೆರಿಗೆ ಇಲಾಖೆಯೊಂದಿಗೆ ಸಮನ್ವಯದಲ್ಲಿ ಕಾರ್ಯನಿರ್ವಹಿಸಬೇಕು ಎಂದು ವೆಚ್ಚ ವೀಕ್ಷಕರಾದ ವಿಕಾಸ್ ಸಿಂಗ್ ಭಗಿ ತಿಳಿಸಿದರು.

ಏವಿಧ ಚುನಾವಣಾ ಸಭೆ, ಸಮಾರಂಭಗಳ ಸಂಪೂರ್ಣ ಚಿತ್ರೀಕರಣ ನಡೆಸಿ, ವೆಚ್ಚ ಲೆಕ್ಕ ನಿರ್ವಹಿಸಬೇಕು. ಅನುಮತಿ ಪಡೆದುಕೊಂಡಿರುವಷ್ಟೇ ವ್ಯವಸ್ಥೆಗಳು ಇರುವ ಬಗ್ಗೆ ಪರಿಶೀಲಿಸಬೇಕು. ಯಾವುದೇ ಚುನಾವಣಾ ಸಭೆಗಳಲ್ಲಿ ಅಭ್ಯರ್ಥಿಯ ಫೋಟೋ ಕಂಡುಬಂದರೆ ಅಥವಾ ಭಾಷಣಗಳಲ್ಲಿ ಹೆಸರು ಪ್ರಸ್ತಾಪವಾದರೆ, ಆ ಸಭೆಯ ಸಂಪೂರ್ಣ ವೆಚ್ಚವನ್ನು ಅಭ್ಯರ್ಥಿಯ ಲೆಕ್ಕಕ್ಕೆ ತೆಗೆದುಕೊಳ್ಳಲು ಅವರು ನಿರ್ದೇಶಿಸಿದರು.

ವಾಹನಗಳಲ್ಲಿ ಯಾವುದೇ ರಾಜಕೀಯ ನಾಯಕರ ಅಥವಾ ಅಭ್ಯರ್ಥಿಯ ಫೋಟೋ ಅಥವಾ ಚಿಹ್ನೆ ಪ್ರದರ್ಶಿಸಲು ಅನುಮತಿ ಅಗತ್ಯ. ಇಲ್ಲದಿದ್ದರೆ ಅಂತಹ ವಾಹನ ಮಾಲಕರ ವಿರುದ್ಧ ಕೇಸು ದಾಖಲಿಸುವಂತೆ ವೀಕ್ಷಕರು ಸೂಚಿಸಿದರು. ಮದ್ಯ ಮಾರಾಟ ಅಂಗಡಿಗಳಲ್ಲಿ ಮಾರಾಟದಲ್ಲಿ ಒಮ್ಮಲೇ ಏರಿಕೆಯಾಗುವ ವ್ಯವಹಾರದ ಮೇಲೆ ಅಬಕಾರಿ ಇಲಾಖೆ ಅಧಿಕಾರಿಗಳು ನಿಗಾ ಇಡಬೇಕು. ದಿನಸಿ ಅಂಗಡಿಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ತಡೆಗಟ್ಟಲು ಫ್ಲೈಯಿಂಗ್ ಸ್ಕ್ವಾಡ್ ತಂಡಗಳು ನಿರಂತರ ತಪಾಸಣೆ ನಡೆಸಬೇಕು. ಚೆಕ್‌ಪೋಸ್ಟ್‌ಗಳು ಒಂದೇ ಸ್ಥಳದಲ್ಲಿ ಕಾರ್ಯಾಚರಿಸುವ ಬದಲು ನಿರಂತರವಾಗಿ ಸ್ಥಳ ಬದಲಾಯಿಸಿ ತಪಾಸಣೆ ನಡೆಸಲು ವೀಕ್ಷಕರು ತಿಳಿಸಿದರು.

ರೈಲು ಟಿಕೇಟ್‌ಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಕಾದಿರಿಸುವ ಪ್ರಕರಣಗಳ ಮೇಲೆ ನಿಗಾ ಇಡಬೇಕು. ರೈಲುಗಳಲ್ಲಿ ಸಾಗಾಟ ಮಾಡುವ ಸರಕುಗಳ ದಾಖಲೆ ಸರಿಯಾಗಿ ಪರಿಶೀಲಿಸುವಂತೆ ಅವರು ರೈಲ್ವೇ ಅಧಿಕಾರಿಗಳಿಗೆ ಸೂಚಿಸಿದರು. ಪೆಟ್ರೋಲ್ ಪಂಪ್‌ಗಳಲ್ಲಿ ಕೂಪನ್ ನೀಡಿ ಪೆಟ್ರೋಲ್/ಡೀಸೆಲ್ ಹಾಕಿಸುವ ಪ್ರಕರಣಗಳ ಸಾಧ್ಯತೆ ಇದ್ದು, ಅಂತಹ ವ್ಯವಹಾರಗಳ ಮೇಲೆ ನಿರಂತರವಾಗಿ ನಿಗಾ ಇಡಬೇಕು ಎಂದರು.

ಸಭೆಯಲ್ಲಿ ವೆಚ್ಚ ವೀಕ್ಷಕರು ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ ತಪಾಸಣಾ ತಂಡಗಳ ಕಾರ್ಯಚರಣೆಗಳ ಮಾಹಿತಿ ಪಡೆದರು. ಜಿಲ್ಲಾ ಚುನಾವಣಾಧಿಕಾರಿ ಸತ್ಯಭಾಮಾ ಅವರು ಕೇಂದ್ರ ವೀಕ್ಷಕರಿಗೆ ಹಾಸನ ಲೋಕಸಭಾ ಕ್ಷೇತ್ರದಲ್ಲಿ ಕೈಗೊಂಡಿರುವ ವಿವಿಧ ಚುನಾವಣಾ ಸಿದ್ಧತೆಗಳ ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್ ಪೂರ್ಣಿಮಾ, ಜಿಲ್ಲಾ ಪೊಲೀಸ್ ಅಧೀಕ್ಷಕ ಮುಹಮ್ಮದ್ ಸುಜೀತಾ, ಅಪರ ಜಿಲ್ಲಾಧಿಕಾರಿ ಕೆ.ಟಿ. ಶಾಂತಲಾ, ಆದಾಯ ತೆರಿಗೆ ಇಲಾಖೆ ಅಧಿಕಾರಿ ದರ್ಶನ್ ಕುಮಾರ್, ಅಬಕಾರಿ ಅಧಿಕಾರಿ ಮೋತಿಲಾಲ್, ಲೀಡ್ ಬ್ಯಾಂಕ್ ಮೆನೇಜರ್ ಗಾಯತ್ರಿ ದೇವಿ ಮತ್ತಿತರರು ಇದ್ದರು.

ಕಾವೇರಿ ಜಲಾಶಯದ ಕೀಲಿ ಪ್ರಾಧಿಕಾರದ ಕೈಯಲ್ಲಿದೆ: ರಮೇಶ್‌ಗೌಡ

■ ಕಾಯಕಯೋಗಿ ಸುದ್ದಿ

ಚನ್ನಪಟ್ಟಣ: ಕಾವೇರಿ ಜಲಾಶಯದ ನೀರು ಹಂಚಿಕೆ ವಿಚಾರದಲ್ಲಿ ನಮ್ಮ ಜನಪ್ರತಿನಿಧಿಗಳ ನಿರ್ಲಕ್ಷ್ಯ ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ಜಲಾಶಯದ ಕೀಲಿ ಕೈ ಪ್ರಾಧಿಕಾರದ ಕೈಗೆ ಸೇರಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಯಾವುದೇ ಕ್ರಮಕ್ಕೆ ಮುಂದಾಗುತ್ತಿಲ್ಲ ಎಂದು ಕಕಸಜ ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡರು ಅಭಿಪ್ರಾಯಿಸಿದರು.



ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿ ಕನ್ನೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ 2023ರ ಅ.5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಶುಕ್ರವಾರ ನಡೆದ 177 ನೇ ದಿನದ ಹೋರಾಟದಲ್ಲಿ ಅವರು ಮಾತನಾಡಿ, ರಾಜ ಮಹಾರಾಜರ ಕಾಲದಿಂದಲೂ ತಮಿಳುನಾಡು ನಮ್ಮ ಜಲಾಶಯದ ನೀರಿನ ಮೇಲೆ ಪ್ರಾಬಲ್ಯ ಸಾಧಿಸುತ್ತಾ ಬಂದಿದೆ. ಅಂದು ರಾತ್ರೋರಾತ್ರಿ ಜಲಾಶದ ನೀರನ್ನು ಕಳ್ಳತನದಿಂದ ಹರಿಸಿಕೊಳ್ಳುತ್ತಿದ್ದರು ಬಳಿಕ ಎಲ್‌ಟಿಟಿ ಸಂಘಟನೆ ಮೂಲ ನೀರಿನ ಮೇಲೆ ಪ್ರಾಬಲ್ಯ ಸಾಧಿಸಿದರು. ಆದರೆ ಬಿಟೀಷ್ ಸರ್ಕಾರದಲ್ಲಿ ಕೆಆರ್‌ಎಸ್ ಜಲಾಶಯದ ನೀರು ಹಂಚಿಕೆ ಒಪ್ಪಂದ ಮಾಡಿಕೊಂಡ ಮೇಲೆ ರಾಜ್ಯದಲ್ಲಿ ಸಮವೃದ್ಧವಾಗಿ ಮಳೆ ಇದ್ದ ಕಾರಣ ಸಮಸ್ಯೆ ಇರಲಿಲ್ಲ. ಆದರೆ ಕ್ರಮೇಣ ಮಳೆಯ ಕೊರತೆ ಉಂಟಾದಂತೆಲ್ಲಾ ರಾಜ್ಯಕ್ಕೆ ನೀರಿನ ಸಮಸ್ಯೆ ಉಂಟಾಯಿತು. ಆದರೆ ಕೇಂದ್ರ ಸರ್ಕಾರದಲ್ಲಿ ಆಡಳಿತ ಮಾಡಿದ ಎಲ್ಲಾ ಸರ್ಕಾರಗಳು ತಮಿಳುನಾಡಿನಲ್ಲಿ ಪ್ರಾದೇಶಿಕ ಪಕ್ಷದ ಸರ್ಕಾರಗಳ ಪ್ರಾಬಲ್ಯ ಕಡಿಮೆ ಮಾಡಲು ತಮಿಳುನಾಡಿನ ಪರವಾಗಿ ಹೆಜ್ಜು ಒಲವು ನೀಡುತ್ತಾ ಬಂದಿದ್ದಾರೆ ಎಂದರು.

ಕೇಂದ್ರ ಸರ್ಕಾರದ ಮುಂದೆ ತಮಿಳುನಾಡಿನ ಪ್ರಾದೇಶಿಕ ಪಕ್ಷ ಸರ್ಕಾರ ಏರೋಧ ಪಕ್ಷವಾಗಿ ಪ್ರಶ್ನೆ ಮಾಡುತ್ತಿದೆ ಎಂದರೆ ಅದಕ್ಕೆ ತಮಿಳುನಾಡು ಸರ್ಕಾರದಲ್ಲಿನ ಜನಪ್ರತಿನಿಧಿಗಳಿಗೆ ಅವರ ಜನತೆಯ ಮೇಲಿನ ಕಾಳಜಿ ಮತ್ತು ಇಚ್ಚಾಶಕ್ತಿಯೇ ಕಾರಣವಾಗಿದೆ. ಆದರೆ ನಮ್ಮ ರಾಜ್ಯದ ಜನಪ್ರತಿನಿಧಿಗಳಿಗೆ ನಮ್ಮ ನೀರನ್ನು ಉಳಿಸಿಕೊಳ್ಳುವ ಇಚ್ಚಾಶಕ್ತಿಯೇ ಇಲ್ಲವಾಗಿದೆ. ನಮ್ಮ ರಾಜ್ಯದಲ್ಲಿ ಆಡಳಿತ ಮಾಡಿದ ಯಾವುದೇ ಪಕ್ಷದ ಸರ್ಕಾರಗಳು ಕೇಂದ್ರದ ಮುಂದೆ ಸಮರ್ಥವಾಗಿ ಪ್ರಶ್ನೆ ಮಾಡಲೇ ಇಲ್ಲ. ಬದಾಲಿ ಸುಪ್ರೀ ಕೋರ್ಟ್ ಮತ್ತು ಕೇಂದ್ರ ಸರ್ಕಾರದ ಆದೇಶಕ್ಕೆ ತಲೆ ಬಾಗುತ್ತಾ ಬಂದರು ಇದೀಗ ಅಂತಿಮವಾಗಿ ಕಾವೇರಿ ಜಲಾಶಯದ ಕೀಲಿ ಕೈ ಪ್ರಾಧಿಕಾರದ ಕೈ ಸೇರಿದ್ದು ಜಲಾಶಯದ ಪಕ್ಷದ ತಾಲೂಕಿಗೆ 1 ಟಿಎಂಸಿ ನೀರು ಬಿಡಲು ಸಹ ನಮ್ಮ ಸರ್ಕಾರದ ಮುಖ್ಯಮಂತ್ರಿಗಾಗಲಿ ಸಚಿವರಿಗಾಗಲಿ ಅಧಿಕಾರ ಇಲ್ಲ ಕಾವೇರಿ ಪ್ರಾಧಿಕಾರದಿಂದ ನೀರು ಬಿಡಲು, ನೀರು ನಿಲ್ಲಿಸಲು ಪ್ರಾಧಿಕಾರದ 5 ಮಂದಿ ತೀರ್ಮಾನ ಮಾಡಬೇಕಿದೆ. ಇದು ನಮ್ಮ ಜನಪ್ರತಿನಿಧಿಗಳ ನಿರ್ಲಕ್ಷ್ಯದಿಂದ ನಮ್ಮ ನೀರನ್ನು ನಾವೇ ಬಳಕೆ ಮಾಡಲು ಆಗುತ್ತಿಲ್ಲ ಎಂದು ರಮೇಶ್‌ಗೌಡ ಬೇಸರ ವ್ಯಕ್ತಪಡಿಸಿದರು.

ಮುಂದಿನ ಪೀಳಿಗೆ ನೀರಿಗಾಗಿ ಪರದಾಡ ದಂತೆ ಮುಂಜಾಗ್ರತೆ ನಮ್ಮ ಈ ಹೋರಾಟದ ಉದ್ದೇಶವಾಗಿದೆ. ನಮ್ಮ ರಾಜ್ಯದ ಸಂಸದ ಸದಸ್ಯರು ಕಳೆದ 10 ವರ್ಷಗಳಿಂದ ಕೇಂದ್ರದ ಮುಂದೆ ಕಾವೇರಿ ನೀರು ಹಂಚಿಕೆ ವಿಚಾರದಲ್ಲಾಗಲಿ, ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ತರುವ ವಚಾರದಲ್ಲಾಗಲಿ ಒಂದು ಮಸನಿಯಂಯನ್ನು ನೀಡಿಲ್ಲ. ಇಂತಹ ಜನಪ್ರತಿನಿಧಿಗಳ ಇಚ್ಚಾಶಕ್ತಿ ಕೊರತೆ ಮುಂದಿನ ಪೀಳಿಗೆ ಮೇಲೆ ಪರಿಣಾಮ ಬೀಡುತ್ತದೆ ಎಂದು ರಮೇಶ್‌ಗೌಡ ಅಭಿಪ್ರಾಯಿಸಿದರು.

ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡ(ಎನ್‌ಜಿ) ಮಾತನಾಡಿ, ಮೇಕೆದಾಟು ಯೋಜನೆ ತಮಿಳುನಾಡಿಗೆ ನೀರು ಬಿಡಬಾರದು ಎಂಬ ಉದ್ದೇಶದಿಂದ ನಿರ್ಮಾಣ ಮಾಡುತ್ತಿಲ್ಲ. ನಮಗೆ ಹೆಚ್ಚು ಮಳೆ ಬಂದಾಗ ತಮಿಳುನಾಡಿಗೆ ಹರಿಸುವ ನೀರಿನ ಜೊತೆಗೆ ಸಮುದ್ರದ ಪಾಲಾಗುವ ನೀರನ್ನು ಉಳಿಸಿಕೊಳ್ಳುವ ಕುಡಿಯುವ ನೀರಿಗೆ ಬಳಕೆ ಮಾಡಿಕೊಳ್ಳುವ ಉದ್ದೇಶದಿಂದ. ಇಂದು ಚುನಾವಣೆ ನಾಮಪತ್ರ ಸಲ್ಲಿಕೆ ವೇಳೆ ಸಿಎಂ ಸಿದ್ದರಾಮಯ್ಯ ಮತ್ತು ನೀರಾವರಿ ಮಂತ್ರಿ ಡಿಕೆ ಶಿವಕುಮಾರ್ ನಮಗೆ ಅನುಮತಿ ಕೊಟ್ಟರೆ ಜಲಾಶಯ ಕಟ್ಟಲು ಸಿದ್ಧ ಎನ್ನುತ್ತಾರೆ. ಅತ್ತ ದೇವೇಗೌಡರು ಸಹ ಇದಕ್ಕೆ ಒಲವು ತೋರಿದ್ದಾರೆ. ಆದರೆ ಇವರಲ್ಲಿನ ರಾಜಕೀಯ ಪ್ರತಿಷ್ಠೆ ಬಿದಿಗಡದೆ ಈ ಯೋಜನೆ ಅನುಷ್ಠಾನಕ್ಕೆ ಬರುವುದಿಲ್ಲ ಈ ನಿಟ್ಟಿಲ್ಲಿ ಪ್ರಾಣತ್ಯಾಗ ಮೇಕೆದಾಟು ಆಣೆಕಟ್ಟೆ ಕಟ್ಟಲು ಜನಪ್ರತಿನಿಧಿಗಳು ಮುಂದಾಗಲಿ ಎಂದು ಮನವಿ ಮಾಡಿದರು. ಪ್ರತಿಭಟನೆಯಲ್ಲಿ ಈಜು ವೇದಿಕೆ ಜಿಲ್ಲಾಧ್ಯಕ್ಷ ಬೆವ್ವರು ಯೋಗೇಶ್‌ಗೌಡ, ರಾಜ್ಯ ಉಪಾಧ್ಯಕ್ಷರುಗಳಾದ ಬೆಳಕು ಶ್ರೀಧರ್, ರಂಜೆಶ್‌ಗೌಡ, ಜಯರಾಮು, ಮೇಣಸಿಗನಹಳ್ಳಿ ರಾಮಕೃಷ್ಣಸ್ವಾ ರಾಜು, ಚಿಕ್ಕಕ್ಷಾಪ್ಪ ಚಾಲಕ ಪುರಿ ಸಿದ್ದು, ಚಿಕ್ಕೇನಹಳ್ಳಿ ಸಿದ್ದಪ್ಪಾಜಿ, ಸೇರಿದಂತೆ ಹಲವರು ಇದ್ದರು.

ನಾಗರಾಜ್ ಕಾಂಗ್ರೆಸ್ ಸೇರ್ಪಡೆ

ರಾಮನಗರ: ಕಳೆದ 20 ವರ್ಷಗಳಿಂದ ಜೆಡಿಎಸ್ ಪಕ್ಷಕ್ಕಾಗಿ ದುಡಿದಿದ್ದೇನೆ. ಆದರೆ, ಜೆಡಿಎಸ್‌ನಿಂದ ಯಾವುದೇ ಪ್ರತಿಫಲ ಸಿಗಲಿಲ್ಲ. ನಮ್ಮ ಶ್ರಮವನ್ನು ಗುರುತಿಸುವ ಕೆಲಸ ಆಗಿಲ್ಲ. ಹಾಗಾಗಿ ಪಕ್ಷದ ನಡವಳಿಕೆಗೆ ಬೇಸತ್ತು ಕಾಂಗ್ರೆಸ್ ಸೇರ್ಪಡೆಯಾದ್ದೇನೆ ಎಂದು ಹಿಂದುಳಿದ ಜಾತಿ ವರ್ಗಗಳ ಮಹಾ ಒಕ್ಕೂಟ ಜಿಲ್ಲಾಧ್ಯಕ್ಷ ರೈಡ್ ನಾಗರಾಜ್ ತಿಳಿಸಿದರು.

ನಗರದ ಖಾಸಗಿ ಕಚೇರಿ ಆವರಣದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.ಕೆ.ಸುರೇಶ್ ಅವರು ಗುರುವಾರ ಸಂಸತ್ ಚುನಾವಣೆಗೆ ನಾಮಪತ್ರ ಸಲ್ಲಿಸುವ ಸಂಬಂಧ ನಗರದ ಶ್ರೀಚಾಮುಂಡೇಶ್ವರಿ ದೇವಾಲಯಕ್ಕೆ ಪೂಜೆಗೆ ಆಗಮಿಸಿದ್ದರು. ಅವೇಳೆ ಸುರೇಶ್ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಸೇರ್ಪಡೆಯಾಗಿದ್ದೇನೆ. ಶೀಘ್ರದಲ್ಲಿಯೇ 100ರಕ್ಕೂ ಹೆಚ್ಚು ಮಂದಿ ಕಾಂಗ್ರೆಸ್ ಸೇರ್ಪಡೆಗೊಳಿಸುವ ಕಾರ್ಯಕ್ರಮ ಆಯೋಜಿಸಲಾಗುತ್ತದೆ ಎಂದು ಹೇಳಿದರು.

ಇತ್ತೀಚೆಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾಂಗ್ರೆಸ್ ಸೇರ್ಪಡೆ ಸಂಬಂಧ ಕರೆದು ಮಾತನಾಡಿದ್ದರು. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಸಂಸದ ಡಿ.ಕೆ.ಸುರೇಶ್ ಉತ್ತಮ ಕೆಲಸಗಾರಿದ್ದಾರೆ. ಜತೆಗೆ, ಶಾಸಕ ಇಕ್ಬಾಲ್ ಹುಸೇನ್ ಶಾಸಕರಾದ ಬಳಿಕ ರಾಮನಗರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸ ಮಾಡುತ್ತಿದ್ದಾರೆ. ಸರಕಾರ ಅಭಿವೃದ್ಧಿ ಗಮನಿಸಿ ನಾನು ಕಾಂಗ್ರೆಸ್ ಪಕ್ಷ ಸೇರ್ಪಡೆಯಾಗಿದ್ದೇನೆ. ಈ ವೇಳೆ ಕಾಂಗ್ರೆಸ್‌ನಿಂದ ಯಾವುದೇ ಹುದ್ದ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ-6 | 30-03-2024
ಬೆಂಗಳೂರು

ಡಾ.ಪ್ರಸನ್ನಗೌಡ ಜನ್ಮದಿನಾಚರಣೆ: ದೇವಾಲಯದಲ್ಲಿ ವಿಶೇಷ ಪೂಜೆ

■ ಕಾಯಕಯೋಗಿ ಸುದ್ದಿ

ಚನ್ನಪಟ್ಟಣ: ನಗರದ ಕೊಲ್ಲಾಪುರದಮ್ಮ ಮಹಾಲಕ್ಷ್ಮೀ ದೇವಾಲಯದಲ್ಲಿ, ಡಾ॥ ಪ್ರಸನ್ನಗೌಡರವರ ಜನ್ಮದಿನದ ವಿಶೇಷವಾಗಿ, ಪ್ರಸನ್ನರವರ ಅಭಿಮಾನಿ ಬಳಗ, ಪೂಜೆ ಮಹಾಮಂಗಳಾರತಿ ಹಾಗೂ ಸಿಹಿ ವಿತರಣೆ ಮಾಡಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಭೂಹಳ್ಳಿ ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷ, ವಿಎಸ್‌ಎಸ್ ಎನ್ ಮಾಜಿ ಅಧ್ಯಕ್ಷ ಹಾಗೂ ಜೆಡಿಎಸ್ ಪಕ್ಷದ ಹಿರಿಯ ಮುಖಂಡ ಉಜ್ಜನಹಳ್ಳಿ ಪ್ರಭು, ಸಮಾಜಸೇವೆಯನ್ನು ತುಡಿತ ಮಾಡಿಕೊಂಡು,ತಾಲ್ಲೂಕಿನಲ್ಲಿರುವ ಬಡಬಿದು,ಬಲ್ಲಿದರು,ವಿಕಲಚೇತನರು, ನೊಂದವರಿಗೆ ಸಹಾಯಸ್ತ ಚಾಚುತ್ತಾ ಬಂದಿರುವ ಪಂಚಮಿ ಬೆವರೇಜ್ ಲಿಮಿಟೆಡ್‌ನ ಸಂಸ್ಥಾಪಕರು ಹಾಗೂ ಜೆಡಿಎಸ್ ಪ್ರಭಾವಿ ಮುಖಂಡರಾದ ಡಾ॥ ಪ್ರಸನ್ನಗೌಡರವರಿಗೆ ಭಗವಂತ ಆರೋಗ್ಯವೃದ್ಧಿ ಮಾಡಲಿ ಎಂದು ದೇವರನ್ನು ಪ್ರಾರ್ಥಿಸಿದರು.

ದೇವಾಲಯದಲ್ಲಿ ಪೂಜೆ ಸಲ್ಲಿಸಿದ ಅಭಿಮಾನಿ ಬಳಗ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿನ ನೂರಾರು ಒಳರೋಗಿಗಳಿಗೆ ಹಣ್ಣು,ಹಂಪಲು,ಬ್ರಡ್ಡು ವಿತರಣೆ ಮಾಡಿದರು. ನಂತರ ತಾಲ್ಲೂಕಿನ ದೇವರಹಳ್ಳಿ ಗ್ರಾಮದ ಶಿರಡಿ ಸಾಯಿಬಾಬಾ ಅನಾಥ ವೃದ್ಯಾಶ್ರಮಕ್ಕೆ ತೆರಳಿ,ಹಣ್ಣುಹಂಪಲು,ಬ್ರಡ್ಡು ಹಾಗೂ ದಿನಸಿ ಪದಾರ್ಥಗಳನ್ನು ವಿತರಣೆ ಮಾಡಿದರು.

ವೃದ್ಯಾಶ್ರಮದ ಹಿರಿಯ ಜೀವಗಳು ಡಾ॥ ಪಿ.ಪ್ರಸನ್ನಗೌಡರರಿಗೆ ಭಗವಂತ ಒಳ್ಳೆಯದನ್ನು ಮಾಡಲು, ಶಿರಡಿ ಸಾಯಿಬಾಬಾರವರ ಪ್ರಾರ್ಥನೆ ಮಾಡಿದರು. ಈ ಸಂದರ್ಭದಲ್ಲಿ ಜೆಡಿಎಸ್ ಹಿರಿಯ ಮುಖಂಡ ಕೃಷ್ಣೇಗೌಡ, ನಗರಸಭಾ ಸದಸ್ಯ ಕಂಠಿ, ಭೂಹಳ್ಳಿ ಗ್ರಾಮ ಪಂಚಾಯ್ತಿ ಉಪಾಧ್ಯಕ್ಷೆ ಯಶೋಧ, ಮಹಿಳಾ ಮುಖಂಡರಾದ ರೇಖಾಉಮಾಶಂಕರ್,ಬಾಬು ಹಾಗೂ ಹಲವಾರು ಮುಖಂಡರು ಹಾಜರಿದ್ದರು.

ರಾಜಕೀಯ ಬೆಳವಣಿಗೆಗಳಿಂದ ಮನಸ್ಸಿಗೆ ಆಘಾತ: ಮುನಿಯಪ್ಪ

■ ಕಾಯಕಯೋಗಿ ಸುದ್ದಿ

ದೇವನಹಳ್ಳಿ :ರವಿ ಕಾಣದ್ದನ್ನಾ ಕವಿ ಕಂಡ ಎಂಬ ಗಾದೆ ಮಾತಿನಂತೆ ಕೋಲಾರ ಲೋಕಸಭಾ ಕ್ಷೇತ್ರದ ಬಿಕ್ಕಟ್ಟಿನ ಹಿಂದೆ ಯಾರಿದ್ದಾರೆ ಎಂಬುದನ್ನು ಮಾಧ್ಯಮದವರೇ ಹುಡಕಬೇಕು ಇಂತಹ ರಾಜಕೀಯ ಬೆಳವಣಿಗೆಗಳಿಂದ ಮನಸ್ಸಿಗೆ ಆಘಾತವಾಗಿದೆ ಎಂದು ಸಚಿವ ಕೆಹೆಚ್. ಮುನಿಯಪ್ಪ ಹೇಳಿದರು.

ಇಂದು ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದ ಸಚಿವರು ನಾನು ಕೇಂದ್ರದಲ್ಲಿ 40 ವರ್ಷಗಳ ಕಾಲ ರಾಜಕೀಯ ಮಾಡಿರುವವನು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳು ನನಗೆ ತವರು ಮನೆ ಇದ್ದಂತೆ ನಾನು ಮಾತು ಕೊಟ್ಟಿದ್ದೇನೆ ಎರಡು ಕ್ಷೇತ್ರದಲ್ಲಿ ನಾನು ಅಭ್ಯರ್ಥಿ ಗಳನ್ನು ಗೆಲ್ಲಿಸಿ ಕೊಂಡು ಬರುತ್ತೇನೆ ಎಂದಿದ್ದೇನೆ ಆದರೆ ನಾವೆಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕಾಗಿದೆ.

ನನ್ನ ಮನಸ್ಸಿಗೆ ನೋವುಂಟಾಗಿದೆ ನಾನು ಕಾಂಗ್ರೆಸ್ ಪಕ್ಷದ ಶಿಸ್ತಿನ ಸಿಪಾಯಿ ಪಕ್ಷ ನಮಗೆ ದೊಡ್ಡದು ನನಗೆ ಎಲ್ಲಾ ಅಧಿಕಾರವನ್ನು ಕಲ್ಪಿಸಿದ್ದು ನಾನು ಹೈಕಮಾಂಡ್ ನಿರ್ಧಾರಕ್ಕೆ ಬದ್ಧ ನಾಗಿದ್ದು ಕೋಲಾರ ಲೋಕಸಭೆಯಲ್ಲಿ ಈ ಬಾರಿ ನಾವು ಜಯಗಳಿಸಬೇಕಾಗಿರುವುದರಿಂದ ನಮ್ಮ ಕುಟುಂಬದ ಚಿಕ್ಕ ಪೆದ್ದಣ್ಣ ಅವರಿಗೆ ಟಿಕೆಟ್ ಕೇಳಿದ್ದು ಹೈಕಮಾಂಡ್ ನೀಡುವ ಆಶಾಭಾವನೆಯಿಂದಿದ್ದೇನೆ

ಕೋಲಾರದ ಬಿಕ್ಕಟ್ಟು ನಿವಾರಿಸುವಲ್ಲಿ ರಾಜ್ಯದ ನಾಯಕರು ಯಾಕೆ ಮಾಡಬಾರದು ಎಐಸಿಸಿ ಅಧ್ಯಕ್ಷರಾದಿಯಾಗಿ ನನಗೆ ಸಮ್ಮತಿ



ಸೂಚಿಸಿದ್ದು ಮುಖ್ಯಮಂತ್ರಿ ಯವರ ನಿರ್ದಾರ ರಿಸಲ್ಟ್ ಓಪಿಯಂಟೆಡ್ ಆಲ್ಲಾ.... ಇಗಲೂ ಕಾಲ ಮಿಂಚಿಲ್ಲಾ ನಮಗೆ ಟಿಕೆಟ್ ನೀಡಿದರೆ ನಾವೆಲ್ಲಾ ಗೆಲ್ಲಿಸಿ ಕೊಂಡು ಬರುತ್ತೇವೆ

ಶ್ರೀನಿವಾಸ ಪುರದ ಮಾಜಿ ಸಚಿವ ರಮೇಶ್ ಕುಮಾರ್ ಅವರ ಮನೆಗೆ ನಾನೇ ಖುದ್ದಾಗಿ ಬೇಟಿ ನೀಡಿದ್ದು ಅವರು ಅನಾರೋಗ್ಯದ ಕಾರಣ ನಮ್ಮ ಸಂಪರ್ಕಕ್ಕೆ ಸಿಕ್ಕಿಲ್ಲಾ .

ಈಗಲೂ ಕಾಲ ಮಿಂಚಿಲ್ಲಾ ರಮೇಶ ಕುಮಾರ್ ರವರನ್ನು ಕೇಳಿ ನಿರ್ದಾರ ಮಾಡಲಿ ಅವರಿಗೂ ಬೇಡ ಇವರಿಗೂ ಬೇಡ ಎಂದರೆ ಅಭ್ಯರ್ಥಿ ಯ ಗೆಲುವು ಕ್ಷೀಣರವಾಗಲಿದೆ

ನಾನು ಯಾವನಾಯಕರ ವಿರುದ್ದವೂ ಕೆಲಸ ಮಾಡಿಲ್ಲಾ ಸಚಿವನಿಗಿರಿ ವಿರೋದಿಸಿಲ್ಲಾ .. ಶಾಸಕರಾಗಲು ಸಹಕರಿಸಿದ್ದೇನೆ ,ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಸಮಸ್ಯ ಬಗೆಹರಿಸುತ್ತಾರೆ ಕೋಲಾರದ ಬಿಕ್ಕಟ್ಟು ಬಗೆಹರಿಸಲು ಸಾದ್ಯವಿಲ್ಲವೇ ಬಗೆ ಹರಿಸು ವವರು ದೊಡ್ಡ ಮನಸ್ಸು ಮಾಡಬೇಕು .

ನಮ್ಮ ಕುಟುಂಬಕ್ಕೆ ಟಿಕೆಟ್ ನೀಡಿದ್ದಲ್ಲಿ ನಾವೆಲ್ಲಾರು ಒಗ್ಗಟ್ಟಾಗಿ ಕೆಲಸ ಮಾಡಿ ಕೋಲಾರ ಲೋಕಸಭಾ ಕ್ಷೇತ್ರ ಗೆಲ್ಲಿಸಿ ಕೊಂಡುಬರುತ್ತೇನೆ ಎಂದರು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಡಿಕೆ ಶಿವಕುಮಾರ್ ರವರು ಮನಸ್ಸು ಮಾಡಿದರೆ ಉತ್ತಮ ಫಲಿತಾಂಶ ನಮ್ಮ ಪರವಾಗುತ್ತದೆ ಕಾದು ನೋಡೋಣ .

ಕಾಂಗ್ರೆಸ್ ಪಕ್ಷದಲ್ಲಿ ಸಮಸ್ಯೆ ಗಳು ಸಹಜವಾಗಿಯೇ ಬರುತ್ತೇ ಹೋಗುತ್ತದೆ ನಾವು ನಮ್ಮ ಸ್ವಪ್ರತಿಷ್ಠೆಗಳನ್ನು ಬದಿಗಿಟ್ಟು ನಾವೆಲ್ಲರೂ ಕೆಲಸ ಮಾಡಬೇಕು ..ಹೈಕಮಾಂಡ್ ಇದನ್ನೂ ಗಮನಿಸುತ್ತಿದೆ ನಾನು ಕಾಂಗ್ರೆಸ್ ಪಕ್ಷದ ಶಿಸ್ತಿನ ಸಿಪಾಯಿ ಯಾಗಿ ಪಕ್ಷವನ್ನು ಕಟ್ಟುತ್ತಿದ್ದೇನೆ ನಮಗೆಲ್ಲಾ ತಾಯಿ ಸಮಾನವಾಗಿ ಪಕ್ಷ ಇರುವುದರಿಂದ ನಾವು ಒಗ್ಗಟ್ಟಾಗಿ ಹೋಗೋಣ ಎಂದರು.

ಸಕಲ ರಂಗಗಳಲ್ಲೂ ಸಲ್ಲುವವಳೇ ಮಹಿಳೆ : ಶ್ರೀದೇವಿ ಮಂಜುನಾಥ್

■ ಕಾಯಕಯೋಗಿ ಸುದ್ದಿ

ದೇವನಹಳ್ಳಿಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ನೆಹರು ಯುವ ಕೇಂದ್ರ ಬೆಂಗಳೂರು ಗ್ರಾಮಾಂತರ ಜಿಲ್ಲೆ ಪರಿವರ್ತನಾ ಕಲಾ ಸಂಸ್ಥೆ ಸಂಯುಕ್ತಾಶ್ರಯ ದಲ್ಲಿ ದೇವನಹಳ್ಳಿ ಟಿ ಆಗ್ರಹಾರದ ಬಾಟಮ್ಮ ಸರ್ಕಲ್ ನಲ್ಲಿ "ನಾರಿ ಶಕ್ತಿ ಫಿಟ್ನೆಸ್ ರನ್" ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಉದಯ ಟಿ..ವಿ ಜನನಿ ಮುಂತಾದ ಧಾರಾವಾಹಿ ಬರಹಗಾರರಾದ ಶ್ರೀದೇವಿ ಮಂಜುನಾಥ್ ಉದ್ಘಾಟಿಸಿ ಮಾತಾನಾಡುತ್ತಾ ಆಧುನಿಕ ಸಕಲ ರಂಗಗಳಲ್ಲೂ ಸರ್ವ ವ್ಯಾಪಿಯಾಗಿ ಸಲ್ಲುವಂತವಳು ಮಹಿಳೆಯಾ ಗಿದ್ದಾಳೆ.

ಮನೆಯಲ್ಲಿ ಸಾಕಷ್ಟು ಕೆಲಸಗಳನ್ನು ಕೆಲಸ ಕಾರ್ಯಗಳನ್ನು ಯಂತ್ರಗಳೇ ನಿಭಾಯಿಸುವುದರಿಂದ ಮಹಿಳೆಯರಿಗೆ ಈ ದಿನಗಳಲ್ಲಿ ಹೆಚ್ಚಿನ ದೈಹಿಕ ಕಸರತ್ತಾಗುತ್ತಿಲ್ಲ

ನಡಿಗೆ ಮತ್ತು ಓಟದಿಂದಿಗೆ ಉತ್ತಮ ಗಾಳಿ ಸೇವಿಸುವುದರಿಂದ ದೈಹಿಕ ಮತ್ತು ಮಾನಸಿಕ ಸದೃಢತೆಯಿಂಟಾಹಾಗುತ್ತದೆ ಈ ನಿಟ್ಟಿನಲ್ಲಿ ಪ್ರತಿನಿತ್ಯದ ಉಲ್ಲಾಸದ ಬದುಕಿಗೆ ನಾಂದಿ ಹಾಡುವುದರ ಜೊತೆಗೆ ಸದೃಢ ಆರೋಗ್ಯವನ್ನು ಹೊಂದಲು ಸಹಕಾರಿಯಾಗುತ್ತದೆ ಹಾಗಾಗಿ ಮಹಿಳೆಯರು ಆರೋಗ್ಯವಂತರಾಗಿದ್ದರೆ ಇಡೀ ಕುಟುಂಬ ಆರೋಗ್ಯವಾಗಿರಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಹಿಳಾ ಜಾತ್ಯತೀತ ಮಹಿಳಾ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷರಾದ ಕನ್ನಡ ರತ್ನ ರವರು ಮಾತನಾಡುತ್ತಾ ಮಹಿಳೆ ಅಬಲೆಯಲ್ಲ ಅವಳು ಸಬಲೆಯಾಗಲು ಸರ್ಕಾರ ಮತ್ತು ಅನೇಕ ಮಹಿಳಾ ಸಂಘ ಸಂಸ್ಥೆಗಳು ಅಹರ್ನಿಶಿ ದುಡಿಯುತ್ತಿವೆ ಸವಲತ್ತುಗಳನ್ನು ಸದ್ಬಳಕೆ ಮಾಡಿಕೊಂಡು ಸಮಾಜದ ಮುಖ್ಯ ವಾಹಿನಿಗೆ ಬನ್ನಿ ಎಂದು ಕರೆ ನೀಡಿದರು.

ಪರಿವರ್ತನಾ ಕಲಾ ಸಂಸ್ಥೆಯ ಕಾರ್ಯದರ್ಶಿ, ನೃತ್ಯ ಸಂಯೋಜಕಿ ದೀಪಿಕಾ ದೇವರಾಜ್ ರವರು ಮಾತನಾಡುತ್ತಾ ಮಹಿಳೆಯರು ಸ್ವಾವಲಂಬಿಗಳಾಗಲು ಮನೆಯಿಂದಲೇ ಸಣ್ಣಪುಟ್ಟ ಗುಡಿ ಕೈಗಾರಿಕೆ ಹಾಗೂ ಕರಕಲ ವಸ್ತುಗಳ ತಯಾರಿಕೆಯಲ್ಲಿ ನೈಪುಣ್ಯತೆ ಪಡೆದುಕೊಂಡು ಕುಟುಂಬವನ್ನು ಪೋಷಿಸಿಕೊಂಡು ಹೋಗುವ ಶಕ್ತಿ ಸಾಮರ್ಥ್ಯವನ್ನು ರೂಡಿಸಿಕೊಂಡು ಎಲ್ಲರಿಗೂ ಮಾದರಿಯಾಗಿ ಬದುಕಲು ಅವಕಾಶವಿದೆ ಈ ನಿಟ್ಟಿನಲ್ಲಿ ಚಿಂತಿಸಿ ಕಾರ್ಯಪ್ರವೃತ್ತರಾಗಬೇಕೆಂದು ಕರೆ ನೀಡಿದರು.

ಈ ಕಾರ್ಯಕ್ರಮದಲ್ಲಿ ನೆಹರು ಯುವ ಕೇಂದ್ರದ ಕಾರ್ಯಕ್ರಮ ವ್ಯವಸ್ಥಾಪಕ ಸುಂದರಮ್ಮ ಮಾತಾಡುತ್ತಾ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಸಮಾಜದ



ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 36 ಮಹಿಳೆಯರನ್ನ ಗುರುತಿಸಿ ಸನ್ಮಾನಿಸು ತ್ತಿರುವುದು ಶ್ಲಾಘನೀಯವಾದದ್ದು ಇನ್ನಷ್ಟು ಸೇವೆ ನಿಮ್ಮದಾಗಲಿ ಎಂದು ಅಭಿನಂದನೆ ಸಲ್ಲಿಸಿದರು.

ಈ ಕಾರ್ಯಕ್ರಮದಲ್ಲಿ ದೇವನಹಳ್ಳಿ ಶಿಲ್ಪಕಲಾ ಶಾಲೆಯ ವ್ಯವಸ್ಥಾಪಕ ಸಾರಿಕಾ ಮಧುಸೂದನ್, ಕೌಶಲ್ಯ ಅಭಿವೃದ್ಧಿ ಇಲಾಖೆಯ ತರಬೇತಿದಾರರಾದ ಪ್ರಿಯಾಂಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕಿ ಅರುಣ್ ಕುಮಾರಿ, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳಾದ ಚಿನ್ನಹಳ್ಳಿ ನಾಗಮ್ಮ, ಚನ್ನರಾಯಪಟ್ಟಣ ಮಂಜುಳಾ, ದಾದಿ ಸುನಿತಾ, ತೆಲ್ಲೋಹಳ್ಳಿ ನಂದಿನಿ ವಿಜಯ್ ಕುಮಾರ್, ವೆಂಕಟಗಿರಿಕೋಟೆ ಪಾರುರೆಡ್ಡಿ ಹಾಜರಿದ್ದರು.

ಪ್ರತಿಯೊಬ್ಬರು ಮೈತ್ರಿ ಧರ್ಮ ಪಾಲಿಸಿ

■ ಕಾಯಕಯೋಗಿ ಸುದ್ದಿ



ಕುಂದಾಣ: ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಅಭಿಯವ್ಯದರಿಂದ' ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಕ್ಕೆ ಡಾ.ಕೆ. ಸುಧಾಕರ್ ಮೈತ್ರಿ ಅಭ್ಯರ್ಥಿ ಯಾಗಿ ಸ್ಪರ್ಧಿಸುತ್ತಿ ರುವುದರಿಂದ ಅವರ ಗೆಲುವಿಗೆ ಶ್ರಮಿಸಬೇಕು ಎಂದು ಲಿಂಗದೀರ ಗೊಲ್ಲಹಳ್ಳಿ ಜೆಡಿಎಸ್ ಮುಖಂಡ ರಘು ತಿಳಿಸಿದರು. ದೇವನಹಳ್ಳಿ ತಾಲೂಕು ಜೆಡಿಎಸ್ –ಬಿಜೆಪಿ ಮೈತ್ರಿ ಧರ್ಮವನ್ನು ಪ್ರತಿಯೊಬ್ಬರು ಪಾಲಿಸಬೇಕು. ಮಾಜಿ ಪ್ರಧಾನಿ ದೇವೇಗೌಡರು ಈಗಾಗಲೇ ಪ್ರಧಾನಿ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿ ಮಾಡಬೇಕು ಎಂದು ಹೇಳಿದ್ದಾರೆ. ಆದರಂತೆ ನಾವೆಲ್ಲರೂ ಒಗ್ಗೂಡಿ ಈ ಭಾಗದಲ್ಲಿ ಲೋಕಸಭಾ ಸದಸ್ಯರನ್ನು ಗೆಲ್ಲಿಸಿಕೊಳ್ಳಬೇಕು. ವರಿಷ್ಠರ ತೀರ್ಮಾನಕ್ಕೆ ಬದ್ಧರಾಗಿರಬೇಕು ಎಂದರು.

ಕಾಂಗ್ರೆಸ್ ಹಣದ ಹೊಳೆ ಹರಿಸಬಹುದು: ದೇವೇಗೌಡ

ಬೆಂಗಳೂರು: ಕೆಲಸ ಮಾಡಿ ಎಲ್ಲಾ ಕ್ಷೇತ್ರಗಳನ್ನೂ ಗೆಲ್ಲಿಸಿ, ಹಳೆಯದನ್ನು ಮರೆಯಿರಿ. ಕಾಂಗ್ರೆಸ್ ಬಳಿ ಸಂಪನ್ಮೂಲ ಹೆಚ್ಚಾಗಿದೆ. ಕಾಂಗ್ರೆಸ್ಸಿನವರು ಬೇರೆ ರಾಜ್ಯಗಳಿಗೂ ಹಣ ಸಾಗಿಸಿದರು. ಕಾಂಗ್ರೆಸ್ ಈ ಚುನಾವಣೆಯಲ್ಲಿ ಹಣದ ಹೊಳೆ ಹರಿಸಬಹುದು ಎಂದು ಮಾಜಿ ಪ್ರಧಾನಿ ದೇವೇಗೌಡ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಣ ಸುರಿಯುವ ಕಾಂಗ್ರೆಸ್ ಪಕ್ಷ ಸೋಲಿಸುವುದು ಸುಲಭವಲ್ಲ. ನಾಯಕರು ಎಲ್ಲಾ ಮಾಹಿತಿಯನ್ನು ಬಿಜೆಪಿ ವರಿಷ್ಠರಿಗೆ ನೀಡುತ್ತಿದ್ದಾರೆ ಎಂದು ದೇವೇಗೌಡ ಹೇಳಿದರು. ಎರೂ ಪಕ್ಷದಲ್ಲಿ ಸಮನ್ವಯ ಸಾಧಿಸಬೇಕು. ಹಿಂದೆ ಆದಂತಹ ವಿಚಾರಗಳನ್ನೆಲ್ಲ ಮರೆತು ನಾವೆಲ್ಲರೂ ಒಂದಾಗಬೇಕಿದೆ ಎಂದು ಅವರು ಹೇಳಿದರು.

ಮತದಾರರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಡೋಳು ಮೇಳ ಬಾರಿಸಿಕೊಂಡು ಮಮತೆಯ ಕರೆಯೋಲೆ ಜಾಗೃತಿ

■ ಕಾಯಕಯೋಗಿ ಸುದ್ದಿ

ವಿಜಯಪುರ:ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಮತದಾರರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಪಟ್ಟಣದ ಪುರಸಭೆಯಿಂದ ಪ್ರಮುಖ ಬೀದಿಗಳಲ್ಲಿ ಡೊಳ್ಳು ಮೇಳ ಬಾರಿಸಿಕೊಂಡು ಜಾಥಾ ಕಾರ್ಯಕ್ರಮಕ್ಕೆ ಪುರಸಭಾ ಮುಖ್ಯಾಧಿಕಾರಿ ಸಂತೋಷ ಕುಮಾರ್ ಚಾಲನೆ ನೀಡಿದ್ದಾರೆ.

ಈ ವೇಳೆ ಮಾತನಾಡಿದ ಅವರು ಲೋಕಸಭಾ ಚುನಾವಣೆಯಲ್ಲಿ ತಪ್ಪದೆ ಮತದಾನ ಮಾಡಬೇಕು. ಈ ಬಗ್ಗೆ ಜಾಗೃತ ಮೂಡಿಸಲು ಡೊಳ್ಳು ಮೇಳದೊಂದಿಗೆ ಮತದಾನದ ಮಮತೆಯ ಕರೆಯೋಲೆ ಪತ್ರಿಕೆಯೊಂದಿಗೆ ಪ್ರತಿ ಮನೆಗೂ ಪತ್ರಿಕೆ



ಹಂಚುವ,ಹಾಗೂ ಮತದಾನದ ಬಗ್ಗೆ ಪ್ರಮಾಣ ವಚನ ಬೋಧಿಸುವ ಮೂಲಕ ಜಾಗೃತಿ ಜಾಥಾ ಮಾಡಲಾಯಿತು.

ಸಮಾಜದ ಪ್ರತಿಯೊಂದು ವರ್ಗದವರೂ ತಪ್ಪದೆ ಮತದಾನ ಮಾಡುವಂತೆ ಉತ್ತೇಜಿಸುವುದು ಈ ಪ್ರಚಾರದ ಉದ್ದೇಶವಾಗಿದೆ ಎಂದರು.

ಪುರಸಭಾ ಕಂದಾಯ ನೀರಿಕ್ಷಕ ತ್ಯಾಗರಾಜು ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯು ನಮ್ಮ ದೇಶದಲ್ಲಿ ಅತಿ ಪ್ರಾಮುಖ್ಯತೆ ಯನ್ನು ಪಡೆದಿದ್ದು, ಈ ವ್ಯವಸ್ಥೆಯಲ್ಲಿ ಪ್ರಜೆಗಳ ಪ್ರತಿನಿಧಿಯನ್ನಾಗಿ ಆರಿಸ್ಕೆ ಮಾಡಲು ನಾವೆಲ್ಲರೂ ಹಕ್ಕುಳ್ಳವರಾಗಿದ್ದೇವೆ. ಆದ್ದರಿಂದ ಮತದಾನ ಮಾಡುವ ಮೂಲಕ ನಮ್ಮ ಹಕ್ಕನ್ನು ಚಲಾಯಿಸಿ ಪ್ರತಿನಿಧಿಗಳನ್ನು ಆಯ್ಕೆ ಮಾಡುವ ಜವಾಬ್ದಾರಿ ನಮ್ಮ ಮೇಲಿರುತ್ತದೆ ಎಂದರು.

ಕಂದಾಯ ಅಧಿಕಾರಿ ಚಿಂಪ್ರು, ಆರೋಗ್ಯ ಅಧಿಕಾರಿ ಲಾವಣ್ಯ, ಪುರಭೆ ಸಿಬ್ಬಂದಿಯಾದ ಅನಿಲ್, ಪವನ್ ಜೋಶಿ, ಜನಾರ್ಧನ, ಸುನೀಲ್, ಮಂಜುನಾಥ್, ಪೃಥ್ವಿ, ಹೇಮಾವತಿ, ಹೇಮಲತಾ, ಲಿಂಗಣ್ಣ, ಕುಮಾರ್, ಮಂಜುನಾಥ್, ಹೇಮಂತ್ ಕುಮಾರ್, ಜನಾರ್ಧನ್, ಪುರಸಭೆ ಪೌರಕಾರ್ಮಿಕರು ಹಾಜರಿದ್ದರು.

NSUI ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಮುಖೇಶ್ ಬಾಬು ಆಯ್ಕೆ



ದೇವನಹಳ್ಳಿ: NSUI ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಮುಖೇಶ್ ಬಾಬುರವರನ್ನು ರಾಜ್ಯಾಧ್ಯಕ್ಷರಾದ ಕೀರ್ತಿಗಣೇಶ್ ರವರು ಆಯ್ಕೆ ಮಾಡಿ ಆದೇಶ ಪತ್ರ ನೀಡಿದ್ದಾರೆ.

ಆದೇಶ ಪತ್ರ ಸ್ವೀಕರಿಸಿ ಮಾತನಾಡಿದ ಮುಖೇಶ್ ಬಾಬು ಅವರು ನಾನು ಅಧ್ಯಕ್ಷನಾಗಿ ಕೆಲಸ ಮಾಡಿದ್ದೆ ರಾಜ್ಯಾಧ್ಯಕ್ಷರಾದ ಕೀರ್ತಿ ಗಣೇಶ್ ರವರನ್ನು ಅಭಿನಯಿಸುತ್ತಿದ್ದೇನೆ ಚಿಕ್ಕಬಳ್ಳಾಪುರ ಲೋಕಸಭಾ ಚುನಾವಣೆಯ ಉಸ್ತುವಾರಿಯನ್ನು ಸಹ ನೀಡಿರುತ್ತಾರೆ ಅವರ ಮಾರ್ಗದರ್ಶನದಲ್ಲಿ ಯುವಕರನ್ನು ಕಾಂಗ್ರೆಸ್ ಪಕ್ಷಕ್ಕೆ ಸೇರಿಸಿಕೊಳ್ಳುವುದರ ಮೂಲಕ ಬೂತ್ ಮಟ್ಟದಿಂದ ಸಂಘಟಿಸುತ್ತೇನೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ರಾಜ್ಯಉಪಾಧ್ಯಕ್ಷ ರಾಧಾ ಮಾರುತಿ ರವರು ಹಾಗೂ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾದ ಪ್ರದೀಪ್ ರಾಜ್ ಕುಮಾರ್ ಮುಖೇಶ್ ಬಾಬು ಅವರನ್ನು ಅಭಿನಂದಿಸಿದರು ಹೆಚ್ಚುವರಿಯಾಗಿ ಚಿಕ್ಕಬಳ್ಳಾಪುರ ಲೋಕಸಭಾ ಚುನಾವಣೆಯ ಉಸ್ತುವಾರಿ ಆಗಿ ನೇಮಕಗೊಂಡಿದ್ದಾರೆ.

ಸದೃಢ ಭಾರತ ನಿರ್ಮಾಣಕ್ಕೆ ನೈತಿಕ ಮತದಾನ ಮಾಡಿ: ಲಕ್ಷ್ಮೀ ಸಲಹೆ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:– ಅವಿಂಡ. ಸದೃಢ ಭಾರತ ನಿರ್ಮಾಣಕ್ಕೆ ಎಲ್ಲರೂ ಕಂಕಣ ಬದ್ಧರಾಗಿ, ಕಡ್ಡಾಯವಾಗಿ ನೈತಿಕ ಮತದಾನ ಮಾಡುವಂತೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಪಿ. ಲಕ್ಷ್ಮಿ ಅವರು ಸಲಹೆ ಮಾಡಿದರು.

ನಗರದ ಜಿಲ್ಲಾಡಳಿತ ಭವನದ ಹಳೇ ಕೆಡಿಪಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಹಿರಿಯ ನಾಗರಿಕರ ಹಾಗೂ ವಿಕಲಚೇತನ ಸಬಲೀಕರಣ ಇಲಾಖೆ ಮತ್ತು ಮೊಬಿ